# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

| ಸಂಪುಟ – 01 | ಸಂಚಿಕೆ – 235 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 05–04–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00 |
|---|---|---|---|---|---|---|
| Volume - 01 | Issue - 235 | Title- Code: KARKAN 28269 | Chitradurga | Date: 05-04-2024 Friday | Page: 4 | Price: Rs. 2-00 |



**ಒಳಪುಟದ ಸುದ್ದಿಗಳು**

ಚಿತ್ರದುರ್ಗ ಲೋಕಸಭಾ ಚುನಾವಣೆ: ನಾಮಪತ್ರ ಸಲ್ಲಿಕೆ ಮುಕ್ತಾಯ **2**

ಅಬಕಾರಿ ಇಲಾಖೆ ಕಾರ್ಯಾಚರಣೆ: ರೂ.1.29 ಕೋಟಿ ಮೌಲ್ಯದ ಮದ್ಯ ವಶ **3**

ರಾಜ್ಯದ 28ರಲ್ಲೂ ಗೆಲುವು ಬಿಜೆಪಿ ಖಚಿತ: ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ **4**



ಸುದ್ದಿ, ಜಾಹಿರಾತಿಗೆ
9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಹೆಲಿಕಾಪ್ಟರ್ ತಪಾಸಣೆ



» ಚಿತ್ರದುರ್ಗ

ಲೋಕಸಭಾ ಚುನಾವಣೆ ಪ್ರಚಾರಕ್ಕೆ ನಗರಕ್ಕೆ ಆಗಮಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಬಿಜೆಪಿ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಪ್ರಯಾಣಿಸಿದ ಹೆಲಿಕಾಪ್ಟರ್‌ನ್ನು ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಎಂ.ಕಾರ್ತಿಕ್ ಪರಿಶೀಲನೆ ನಡೆಸಿದರು. ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಮಧ್ಯಾಹ್ನ 12.45ರ ಸುಮಾರಿಗೆ ಹೆಲಿಕಾಪ್ಟರ್ ಮೂಲಕ ಎಂ.ಕೆ.ಹಟ್ಟಿ ಎಸ್.ಜೆ.ಎಂ.ಆಂಗ್ಲ ಮಾಧ್ಯಮ ಶಾಲಾ ಅವರಣದ ಹೆಲಿಪ್ಯಾಡ್‌ಗೆ ಆಗಮಿಸಿದರು. ಬಿಜೆಪಿ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಮಧ್ಯಾಹ್ನ 1:30ರ ಸುಮಾರಿಗೆ ಹೆಲಿಕಾಪ್ಟರ್ ಮೂಲಕ ಜೆ.ಎಂ.ಐ.ಟಿ ಕ್ಯಾಂಪಸ್ ಆವರಣದ ಹೆಲಿಪ್ಯಾಡ್‌ಗೆ ಆಗಮಿಸಿದರು. ಈ ವೇಳೆ ಚಿತ್ರದುರ್ಗ ವಿಧಾನ ಸಭಾ ಕ್ಷೇತ್ರದ ಸಹಾಯಕ ಚುನಾವಣೆ ಅಧಿಕಾರಿ ಎಂ.ಕಾರ್ತಿಕ್ ಹಾಗೂ ಎಸ್.ಎಸ್.ಟಿ ತಂಡಗಳು ಹೆಲಿಕಾಪ್ಟರ್‌ನ್ನು ತಪಾಸಣೆ ಮಾಡಿದರು. ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ, ಉಪ ತಹಶೀಲ್ದಾರ್ ನಾಗರಾಜ್ ಸೇರಿದಂತೆ ಮತ್ತಿತರರು ಇದ್ದರು.

### ಭೂಗತ ವಿದ್ಯುತ್ ಕೇಬಲ್ ಅಳವಡಿಕೆ : ಭೂಮಿ ಅಗೆಯದಂತೆ ಸೂಚನೆ

» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕು ರಾಮಗಿರಿ ಗ್ರಾಮದ



ವಿದ್ಯುತ್ ಉಪಕೇಂದ್ರದಿಂದ ರೈಲ್ವೆ ಟ್ರ್ಯಾಕ್ಷನ್ ವಿದ್ಯುತ್ ಉಪಕೇಂದ್ರದವರೆಗೆ ಸುಮಾರು 1.770 ಕಿ.ಮೀ. ಉದ್ದದ ಭೂತ ವಿದ್ಯುತ್ ಸರಬರಾಜು ಕೇಬಲ್ ಅಳವಡಿಸುವ ಕಾರ್ಯ ಪೂರ್ಣಗೊಂಡಿದೆ. ಏ.6 ರಿಂದ ಭೂಗತ ವಿದ್ಯುತ್ ಕೇಬಲ್ ಮೂಲಕ ವಿದ್ಯುತ್ ಹಾಯಿಸಲಾಗುವುದು. ಭೂಗತ ವಿದ್ಯುತ್ ಕೇಬಲ್ ರಾಮಗಿರಿ ವಿದ್ಯುತ್ ಉಪಕೇಂದ್ರದ ಹೊರ ರಸ್ತೆ, ರಾಮಗಿರಿ–ಶಿವಾನಿ–ಕಡೂರಿಗೆ ರಸ್ತೆ, ಕೆಂಚವೀರಪ್ಪ ಫರ್ಟಿಲೈಜರ್ಸ್ ಅಂಡ್ ಹಾರ್ಡ್‌ವೇರ್ಸ್, ಮರಳು ಸಿದ್ದೇಶ್ವರ ಟ್ರೇಡರ್ಸ್, ರಾಜಲಕ್ಷ್ಮಿ ಜನರಲ್ ಸ್ಟೋರ್, ಶ್ರೀ ರಾಮ್ ಟ್ರೇಡರ್ಸ್, ರುದ್ರಮುನಿ ಟೆಕ್ಸ್‌ಟೈಲ್ಸ್, ವೆಂಕಟೇಶ್ವರ ಟೆಕ್ಸ್‌ಟೈಲ್ಸ್, ಕರಿಸಿದ್ದೇಶ್ವರ ಟೆಕ್ಸ್‌ಟೈಲ್ಸ್, ಅರಳಿಮರದ ಕಟ್ಟೆ, ಕೆಕೆಎನ್ ಟ್ರೇಡರ್ಸ್, ಸರ್ಕಾರಿ ಶಾಲೆ ಮುಂಭಾಗ, ಅಂಗನವಾಡಿ ಶಾಲೆ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಶುದ್ಧಕುಡಿಯುವ ನೀರಿನ ಘಟಕ, ಕರಿಸಿದ್ದೇಶ್ವರ ಆಟೋ ನಿಲ್ದಾಣ, ರಾಮಗಿರಿ ಬಸ್ ಸ್ಟಾಂಡ್ ಸರ್ಕಲ್ ಮುಂಭಾಗದ ರಸ್ತೆಯ ಮೂಲಕ ರೈಲ್ವೇ ಟ್ರ್ಯಾಕ್ಷನ್ ವಿದ್ಯುತ್ ಉಪಕೇಂದ್ರಕ್ಕೆ ಹಾದು ಹೋಗಿದೆ. ಸಾರ್ವಜನಿಕರು, ಗ್ರಾಮ ಪಂಚಾಯಿತಿ, ಗೇಲ್, ಖಾಸಗಿ ಕಂಪನಿ ಹಾಗೂ ರೈತರು ಭೂಗತ ವಿದ್ಯುತ್ ಕೇಬಲ್ ಹಾದು ಹೋದ ಸ್ಥಳದಲ್ಲಿ ರಸ್ತೆಯನ್ನು ಕಡ್ಡಾಯವಾಗಿ ಅಗೆಯಬಾರದು. ಒಂದು ವೇಳೆ ರಸ್ತೆ ಅಗೆದು ಭೂಗತ ವಿದ್ಯುತ್ ಕೇಬಲ್‌ನಿಂದ ವಿದ್ಯುತ್ ಪ್ರವಹಿಸಿ ಅನಾಹುತಗಳು ಜರುಗಿದರೆ, ವಿದ್ಯುತ್ ಪರಸರಣ ನಿಗಮ ಜವಾಬ್ದಾರಿಯಾಗುವುದಿಲ್ಲ. ಇದರಿಂದ ಉಂಟಾಗುವ ನಿಗಮದ ಆಸ್ತಿ ಹಾಗೂ ಕಂದಾಯ ನಷ್ಟವನ್ನು ರಸ್ತೆ ಅಗೆದವರೇ ಭರಿಸಬೇಕಾಗುತ್ತದೆ ಎಂದು ವಿದ್ಯುತ್ ನಿಗಮದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<u>ಬಿಜೆಪಿಯ ಕಾರಜೋಳ ಅವರ ಬಳಿ ಸಿಕ್ಕಾಪಟ್ಟೆ ಹಣ ಇರಬಹುದು. ಚಂದ್ರಪ್ಪ ಅವರಲ್ಲಿ ಜನಸೇವೆ ಮಾಡುವ ಸಜ್ಜನಿಕೆ, ಕಾಳಜಿ ಇದೆ. ಆದ್ದರಿಂದ ಚಿತ್ರದುರ್ಗದ ಜನತೆ ಮಿಸ್ಟರ್ ಕಾರಜೋಳ್ ಪ್ಲೀಸ್ ಗೋ ಬ್ಯಾಕ್ ಎಂದು ಒಕ್ಕೊರಲಿನಿಂದ ಹೇಳಬೇಕು: ಸಿಎಂ ಸಿದ್ದರಾಮಯ್ಯ ಕರೆ</u>

# ಚಿತ್ರದುರ್ಗ ಕಾಂಗ್ರೆಸ್ ಭದ್ರ ಕೋಟೆ
# ಚಂದ್ರಪ್ಪ 2 ಲಕ್ಷ ಅಂತರದಿಂದ ಗೆಲ್ತಾರೆ

## ಭದ್ರಾ ಮೇಲ್ದಂಡೆ ಯೋಜನೆ ನಾನೇ ಪೂರ್ಣಗೊಳಿಸುತ್ತೇನೆ: ಮುಖ್ಯಮಂತ್ರಿ ಸಿದ್ದರಾಮಯ್ಯ

## ಮಿಸ್ಟರ್ ಮೋದಿಯವರೇ ಆಪರೇಷನ್ ಕಮಲಕ್ಕೆ ಸಾವಿರಾರು ಕೋಟಿ ಎಲ್ಲಿಂದ ಬಂತು?



» ಚಿತ್ರದುರ್ಗ

ಆಪರೇಷನ್ ಕಮಲಕ್ಕೆ ಸಾವಿರಾರು ಕೋಟಿ ಎಲ್ಲಿಂದ ಬಂತು ಮಿಸ್ಟರ್ ಮೋದಿಯವರೇ? ಕಾಂಗ್ರೆಸ್ ಮತ್ತು ಬೇರೆ ಪಕ್ಷದ ಶಾಸಕರುಗಳಿಗೆ ಕೋಟಿ ಕೋಟಿ ಕೊಡುವುದಕ್ಕೆ ಸಾವಿರಾರು ಕೋಟಿ ಹಣ ಎಲ್ಲಿಂದ ಬಂತು. ಅದು ಕಪ್ಪು ಹಣ ಅಲ್ಲವೇ ದೇಶದ ಜನಕ್ಕೆ ಉತ್ತರಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹಿಸಿದರು.

ಚಿತ್ರದುರ್ಗ ನಗರದ ಹಳೆ ಮಾಧ್ಯಮಿಕ ಶಾಲಾ ಆವರಣದಲ್ಲಿ ಚಿತ್ರದುರ್ಗ ಲೋಕಸಭಾ ಅಭ್ಯರ್ಥಿ ಚಂದ್ರಪ್ಪ ಅವರ ಪರವಾಗಿ ಆಯೋಜಿಸಿದ್ದ ಬೃಹತ್ ಬಹಿರಂಗ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ವಿದೇಶದಿಂದ ಕಪ್ಪು ಹಣ ತಂದು ಪ್ರತಿಯೊಬ್ಬ ಭಾರತೀಯನ ಕುಟುಂಬಕ್ಕೆ 15 ಲಕ್ಷ ರೂಪಾಯಿ ಕೊಡ್ತೀವಿ ಅಂದ್ರಲ್ಲಾ ಕೊಟ್ರಾ? ರೈತರ ಆದಾಯ ದುಪ್ಪಟ್ಟು ಮಾಡ್ತೀವಿ ಅಂತ ಭಾಷಣ ಮಾಡಿದ್ರು. ಆದಾಯ ಒಂದು ರೂಪಾಯಿ ಕೂಡ ಹೆಚ್ಚಾಗಲಿಲ್ಲ. ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಮಾಡ್ತೀವಿ ಅಂದ್ರಲ್ಲಾ? ಮಾಡಿದ್ರಾ ಮೋದಿಯವರೇ?

ಪೆಟ್ರೋಲ್, ಡೀಸೆಲ್, ಅಡುಗೆ ಗ್ಯಾಸ್, ರಸಗೊಬ್ಬರ, ಎಣ್ಣೆ, ಕಾಳು ಬೇಳೆ ಎಲ್ಲವೂ ಅತ್ಯಂತ ಕಡಿಮೆ ಬೆಲೆಗೆ ಸಿಗುವಂತೆ ಮಾಡ್ತೀನಿ ಅಂದಿದ್ರಲ್ಲಾ ಮಾಡಿದ್ರಾ ಮಿಸ್ಟರ್ ಮೋದಿ?

ನಿಮ್ಮ ಕಾಲದಲ್ಲಿ ಆದ ಬೆಲೆ ಏರಿಕೆಯಿಂದ ಸಂಕಷ್ಟಕ್ಕೆ ಸಿಲುಕಿದ್ದ ಕುಟುಂಬಗಳಿಗೆ ಕೊಂಚ ನೆಮ್ಮದಿ ನೀಡಬೇಕು ಎನ್ನುವ ಕಾರಣದಿಂದ ಐದು ಗ್ಯಾರಂಟಿ ಜಾರಿ ಮಾಡಿದೆವು. ಪ್ರತೀ ಕುಟುಂಬಕ್ಕೆ 4 ರಿಂದ 6 ಸಾವಿರ ರೂಪಾಯಿ ಉಳಿತಾಯವಾಗಿ ನನ್ನ ಜನರ ಕೊಳ್ಳುವ ಶಕ್ತಿ ಹೆಚ್ಚಾಯಿತು. ಇದು ನಮ್ಮ ಸಾಧ್ಯವಾಗಿದ್ದು ಕಾಂಗ್ರೆಸ್ ಸರ್ಕಾರದಿಂದ ಮಿಸ್ಟರ್ ಮೋದಿಯವರೇ.

ಈ ದೇಶದ ಶೇ 95 ರಷ್ಟು ಬಹುಸಂಖ್ಯಾತ ಜನ ಸಮುದಾಯಕ್ಕೆ ಸಾಮಾಜಿಕ ನ್ಯಾಯ ಮತ್ತು ಸಮಾನ ಅವಕಾಶಗಳನ್ನು ಒದಗಿಸುತ್ತಿರುವುದು ನಮ್ಮ ಸಂವಿಧಾನ. ಈ ಸಂವಿಧಾನವನ್ನು ಬದಲಾಯಿಸುತ್ತೀವಿ ಎನ್ನುವುದು ಬಿಜೆಪಿಯ ಅಜೆಂಡಾ. ಇದನ್ನು ಬಿಜೆಪಿ ಕೇಂದ್ರ ಸಚಿವರಾಗಿದ್ದವರೇ ಬಹಿರಂಗವಾಗಿ ಹೇಳಿದ್ದಾರೆ. ಆದ್ದರಿಂದ ದೇಶದ ಸಂವಿಧಾನವನ್ನು ಬದಲಾಯಿಸಿ ಮನುಸ್ಮೃತಿ ಜಾರಿಗೆ ತರಲು ಅವಕಾಶ ಕೊಡಬೇಡಿ ಎಂದರು.

ಅಧಿಕಾರದಲ್ಲಿದ್ದಾಗ ಹಣ ಲೂಟಿ ಮಾಡೋದು, ಆಮೇಲೆ ಜನರನ್ನು ಭಾವನಾತ್ಮಕವಾಗಿ ಕೆರಳಿಸಿ ಬಕ್ರಾ ಮಾಡೋದು ಅವರ ಅವಕಾಶ. ಚಿತ್ರದುರ್ಗದ ಬಿಜೆಪಿ ಅಭ್ಯರ್ಥಿ ಕಾರಜೋಳ ಅವರು ಇಲ್ಲಿಯವರಲ್ಲ. ಕಾಂಗ್ರೆಸ್ ಚಂದ್ರಪ್ಪ ಅವರು ಸೋತಾಗಲೂ ಜನರ ನಡುವೆ ಇದ್ದು ತಪಸ್ಸಿನಂತೆ ಜನರ ಸಮಸ್ಯೆಗಳಿಗೆ ಸ್ಪಂದಿಸಿದ್ದಾರೆ. ಸಮಾಜ ಕಲ್ಯಾಣ ಸಚಿವರಾಗಿ ಕಾರಜೋಳ ಅವರು ಹಿಂದುಳಿದವರು, ದಲಿತರು, ಶ್ರಮಿಕರು, ದುಡಿಯುವ ವರ್ಗಗಳಿಗೆ ಏನೇನೂ ಮಾಡಿಲ್ಲ.ಕಾರಜೋಳಅವರಬಳಿಸಿಕ್ಕಾಪಟ್ಟೆ ಹಣ ಇರಬಹುದು. ಆದರೆ ಚಂದ್ರಪ್ಪ ಅವರಲ್ಲಿ ಜನಸೇವೆ ಮಾಡುವ ಸಜ್ಜನಿಕೆ, ಕಾಳಜಿ ಇದೆ. ಆದ್ದರಿಂದ ಚಿತ್ರದುರ್ಗದ ಜನತೆ *ಮಿಸ್ಟರ್ ಕಾರಜೋಳ್ ಪ್ಲೀಸ್ ಗೋ ಬ್ಯಾಕ್* ಎಂದು ಒಕ್ಕೊರಲಿನಿಂದ ಹೇಳಬೇಕು ಎಂದು ಕರೆ ನೀಡಿದರು.

ಇವತ್ತಿನವರೆಗೂ ಬಿಜೆಪಿ ರಾಜ್ಯದಲ್ಲಿ ಸ್ವಂತ ಶಕ್ತಿಯಿಂದ ಅಧಿಕಾರಕ್ಕೆ ಬಂದಿಲ್ಲ. ಎರಡೂ ಬಾರಿ ಹಿಂಬಾಗಿಲಿನಿಂದಲೇ ಅಧಿಕಾರಕ್ಕೆ ಬಂದಿದ್ದಾರೆ. ವಾಮ ಮಾರ್ಗದ ಬಿಜೆಪಿಗೆ ನಾಡಿನ ಜನತೆ ತಕ್ಕ ಪಾಠ ಕಲಿಸಿದ್ದಾರೆ ಎಂದರು.

ಪುಟ 2

### ನನಗೆ ಮತ ನೀಡಿ ಗೆಲ್ಲಿಸಿದರೆ ನಿಮ್ಮ ಮನೆ ಮಗನಂತೆ ನಿಮ್ಮೆಲ್ಲರ ಸೇವೆ ಮಾಡುತ್ತೇನೆ



ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಮಾತನಾಡಿ ಹಸಿದ ಬಡವರಿಗೆ ಅನ್ನಭಾಗ್ಯ, ಕ್ಷೀರ ಭಾಗ್ಯ ನೀಡಿದ ಭಾಗ್ಯಗಳ ಸರದಾರ ಸಿದ್ದರಾಮಯ್ಯ ಅವರು ಕಳೆದ 2013 ರಲ್ಲಿ ಇದೆ ಜಾಗದಲ್ಲಿ ಸಿಎಂ ಸಿದ್ದರಾಮಯ್ಯ ಅವರು ಒಂದು ಲಕ್ಷ ಮತಗಳಿಂದ ಗೆಲ್ಲಿಸಿ ಎಂದು ಕರೆ ನೀಡಿದಂತೆ ನೀವು ನನ್ನನ್ನು ಗೆಲ್ಲಿಸಿದ್ದಿರಿ. ಅದರಂತೆ ನಾನು ಐದು ವರ್ಷದಲ್ಲಿ ಸಂಸದ ತರುತ್ತೇವೆ. ಕಳಂಕ ಬಾರದಂತೆ ಕಾರ್ಯ ನಿರ್ವಹಿಸಿದ್ದೇನೆ. ಸೋಲು ಅನುಭವಿಸಿದರು ಸಹ ಬೆನ್ನು ತೋರದೇ ಕ್ಷೇತ್ರದಲ್ಲಿ ಪಕ್ಷ ಮತ್ತು ಎಲ್ಲಾ ಖಾಸಗಿ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದೇನೆ ಎಂದರು. ಶಾಸಕರ ಜೊತೆ ಜಿಲ್ಲೆಯ ಅಭಿವೃದ್ಧಿ ಕೈ ಜೋಡಿಸುತ್ತೇನೆ. ತಾವುಗಳು ಈ ಬಾರಿ ನನಗೆ ಮತಗಳನ್ನು ನೀಡಿ ಗೆಲ್ಲಿಸಿದರೆ ನಾನು ಪ್ರಮಾಣಿಕವಾಗಿ ನಿಮ್ಮ ಅಭಿವೃದ್ಧಿಗೆ ದುಡಿಯುತ್ತೇನೆ. ಹತ್ತು ವರ್ಷದಲ್ಲಿ ವಿರೋಧ ಪಕ್ಷದವರು ಒಂದು ಆರೋಪ ಇಲ್ಲದಂತೆ ಮನೆ ಮಗನಾಗಿ ಕೆಲಸ ಮಾಡಿದ್ದು ಮತ್ತೊಮ್ಮೆ ನನ್ನನ್ನು ಗೆಲ್ಲಿಸುವ ಕೆಲಸವನ್ನು ತಾವುಗಳು ಮಾಡಿ ಎಂದು ಮತಯಾಚನೆ ಮಾಡಿದರು.

### ಮೋದಿ ಹವಾ ಇಲ್ಲ, ಸಿದ್ದರಾಮಯ್ಯ ಹವಾ, ದುರ್ಗದಲ್ಲಿ ಚಂದ್ರಪ್ಪ ಹವಾ ಮಾತ್ರ: ಸತೀಶ್



**ಚಿತ್ರದುರ್ಗ:** ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಮಾತನಾಡಿ ಏಪ್ರಿಲ್ 26 ರಂದು ಜರುಗುವ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ನೀಡುವ ಮೂಲಕ ಬಿ.ಎನ್.ಚಂದ್ರಪ್ಪ ಅವರನ್ನು ಗೆಲ್ಲಿಸಬೇಕು.ಬಿಜೆಪಿ ಸರ್ಕಾರದ 10 ವರ್ಷ ದುರಾಡಳಿತವನ್ನು ಕೊನೆಗೊಳಿಸಲು ಎಲ್ಲಾರೂ ಶ್ರಮಿಸಬೇಕು. ಬಿಜೆಪಿ ಸರ್ಕಾರದಲ್ಲಿ ಒಂದು ಮನೆ ಸಹ ನೀಡಿಲ್ಲ. ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಕೂಡಲೇ 3 ಲಕ್ಷ ಮನೆಗಳನ್ನು ನೀಡಿದೆ. ಈ ಚುನಾವಣೆ ನಿಮ್ಮೆಲ್ಲರ ಆಯ್ಕೆ ಚಂದ್ರಪ್ಪ ಆಗಿರಬೇಕು.ಕಳೆದ ಐದು ವರ್ಷ ಕಾಲ ದೂರದಿಂದ ಬಂದ ನಾರಾಯಣಸ್ವಾಮಿ ಗೆದ್ದು ಓಡಾಟ ಮಾಡಿ ಸುಸ್ತಾಗಿದ್ದಾರೆ. ಈ ದೂರದ ನಮ್ಮ ಭಾಗದಿಂದ ಕಾರಜೋಳ ಬಂದಿದ್ದು ತಕ್ಕ ಉತ್ತರ ಕೊಟ್ಟು ವಾಪಸ್ ಕಳಿಸುವುದು ಕಾಂಗ್ರೆಸ್ ಪಕ್ಷದ ಪ್ರತಿಯೊಬ್ಬರ ಕರ್ತವ್ಯ ಎಂದು ಬಿಜೆಪಿ ವಿರುದ್ಧ ಹರಿಹಾಯ್ದರು. ರಾಜ್ಯದಲ್ಲಿ ದೃವನಾರಾಯಣ ಮತ್ತು ಬಿ.ಎನ್. ಚಂದ್ರಪ್ಪ ಅವರು ಅತ್ಯಂತ ಚಟುವಟಿಕೆಯಿಂದ ಕೆಲಸ ಮಾಡಿದರು. ಹೊರಗಡೆಯಿಂದ ಬರುವ ಅಭ್ಯರ್ಥಿಗಳು ಚಿತ್ರದುರ್ಗ ಟೂರಿಂಗ್ ಟ್ಯಾಕೀಸ್ ಅಂದುಕೊಂಡಿದ್ದು ಈ ಬಾರಿ ನಿಮಗೆ ಸೇವೆ ಮಾಡುವಂತಹ ಸರಳ ಅಭ್ಯರ್ಥಿ, ತಮ್ಮ ಕೆಲಸ ಮಾಡಿಸಿಕೊಳ್ಳಿ, ರಾಜ್ಯದಲ್ಲಿ ಮೋದಿ ಹವಾ ಇಲ್ಲ, ಸಿದ್ದರಾಮಯ್ಯ ಹವಾ ಇದೆ. ಚಿತ್ರದುರ್ಗದಲ್ಲಿ ಚಂದ್ರಪ್ಪ ಹವಾ ಇದೆ ಎಂದು ಹೇಳುವ ಮೂಲಕ ಮೋದಿ ವೇವ್ ರಾಜ್ಯದಲ್ಲಿ ಇಲ್ಲ ಎಂದು ಬಿಜೆಪಿಗರಿಗೆ ಟಾಂಗ್ ನೀಡಿದರು.

### ಚಳ್ಳಕೆರೆ ಅಭಿವೃದ್ಧಿಗೆ ಸಹಕಾರ ನೀಡಿದ ಸಿದ್ದರಾಮಯ್ಯರನ್ನು ಮರೆಯಲು ಸಾಧ್ಯವಿಲ್ಲ

**ಚಿತ್ರದುರ್ಗ:** ಸಿಎಂ ಸಿದ್ದರಾಮಯ್ಯ ಅವರು ನೀಡಿದ ಅನುದಾನದಿಂದ ಚಳ್ಳಕೆರೆ ಕ್ಷೇತ್ರದಲ್ಲಿ ಶಾಶ್ವತ ಅಭಿವೃದ್ಧಿ ಕಾರ್ಯಗಳನ್ನು ಮಾಡಲು ಸಾಧ್ಯವಾಯಿತು ಎಂದು ಶಾಸಕ ಟಿ.ರಘುಮೂರ್ತಿ ಸ್ಮರಿಸಿದರು.



ಚಳ್ಳಕೆರೆ ಕ್ಷೇತ್ರದಲ್ಲಿ ನಾನು ಮೂರು ಬಾರಿ ಗೆಲುವು ಸಾಧಿಸಲು 2013 ರಿಂದ 2018 ರ ವರೆಗೆ ಮಾಡಿ ಅಭಿವೃದ್ಧಿ ಕಾರ್ಯಗಳಿಂದ ಎಂದು ತಿಳಿಸಲು ಬಯಸುತ್ತೇನೆ. ಅಂದು ಮುಖ್ಯಮಂತ್ರಿಗಳಾದ ಸಿಎಂ ಸಿದ್ದರಾಮಯ್ಯ ಅವರು ಅನುದಾನ ಹೊಳೆ ಹರಿಸಿದರು ಆಗ ಚಳ್ಳಕೆರೆಯಲ್ಲಿ ನಡೆದ ಶಾಶ್ವತ ಕಾರ್ಯಗಳನ್ನು ಜನರು ಈಗಲೂ ಸಹ ನೆನೆಯುತ್ತಾರೆ. ನಮ್ಮ ಭಾಗದ ಬಹುದಿನದ ಕನಸಾಗಿರುವ ಭದ್ರಾ ಯೋಜನೆಯಿಂದ ಈ ಭಾಗದ ಜಿಲ್ಲೆಗಳಾದಚಿಕ್ಕಮಗಳೂರು,ಚಿತ್ರದುರ್ಗ, ತುಮಕೂರು ಹಾಗೂ ದಾವಣಗೆರೆ ಜಿಲ್ಲೆಗಳಿಗೆ ಭದ್ರಾ ಮೇಲ್ದಂಡೆ ಯೋಜನೆ ನೀರು ಒದಗಿಸುತ್ತೆ.. ಕರ್ನಾಟಕ ರಾಜ್ಯದ ಅತ್ಯಂತ ಮಹತ್ವದ ಯೋಜನೆಗಳಲ್ಲಿ ಇದೂ ಕೂಡಾ ಒಂದು.. ಮಧ್ಯ ಕರ್ನಾಟಕದ ಐದೂವರೆ ಲಕ್ಷ ಎಕರೆ ಕೃಷಿ ಪ್ರದೇಶಕ್ಕೆ ಈ ಯೋಜನೆ ನೀರು ಕೊಡಲಿದೆ. ಜೊತೆಗೆ ಈ ಭಾಗದ 367 ಕೆರೆಗಳಿಗೆ ನೀರು ತುಂಬಿಸಲಿದೆ. ಈ ಯೋಜನೆಯಿಂದ 787 ಗ್ರಾಮಗಳಿಗೆ ಪ್ರಯೋಜನ ಆಗಲಿದೆ. ಒಟ್ಟಾರೆ 75 ಲಕ್ಷ ಜನರಿಗೆ ಈ ಯೋಜನೆಯಿಂದ ನೇರವಾಗಿ ಅನುಕೂಲ ಆಗುತ್ತದೆ ಎಂದು ಅಂದಾಜು ಮಾಡಲಾಗಿದ್ದು ಈ ಯೋಜನೆಗೆ ಅತ್ಯಂತ ಹೆಚ್ಚಿನ ಅನುದಾನ ನೀಡುವ ಮೂಲಕ ವೇಗದಿಂದ ಕೆಲಸ ಮಾಡಿದ್ದು ಕಾಂಗ್ರೆಸ್ ನೇತೃತ್ವದ ಸಿದ್ದರಾಮಯ್ಯ ಸರ್ಕಾರ ಎಂದು ಜನರು ಅರಿತುಕೊಳ್ಳಬೇಕು.

ಭದ್ರಾ ಯೋಜನೆಯಿಂದ ಚಳ್ಳಕೆರೆ ಮತ್ತು ಮೊಳಕಾಲ್ಮುರು ಕ್ಷೇತ್ರಕ್ಕೆ ವಿ.ವಿ.ಸಾಗರದಿಂದ ಶಾಶ್ವತ ಕುಡಿಯುವ ನೀರಿಗಾಗಿ 0.25 ಟಿಎಂಸಿ ನೀರನ್ನು ನೀಡಿದ ಕೀರ್ತಿ ಸಿದ್ದರಾಮಯ್ಯ ಅವರಿಗೆ ಸಲ್ಲುತ್ತದೆ.

ಇತಿಹಾಸದಲ್ಲಿ ಇಂತಹ ಬರಗಾಲದಲ್ಲಿ ವಿ.ವಿ.ಸಾಗರದ ನೀರನ್ನು ವೇದಾವತಿ ನದಿ ಪಾತ್ರಕ್ಕೆ ಹರಿಸುವ ಕೆಲಸ ಮಾಡಿದ್ದು ಈ ಮಹತ್ವದ ಕಾರ್ಯ ಸಿಎಂ ಕಾರಣ ಎಂದು ಪ್ರತಿಯೊಂದು ಸಿಎಂ ಕಾರ್ಯಗಳನ್ನು ಹಾಡಿಹೊಗಳಿದರು.

ಸಿದ್ದರಾಮಯ್ಯ ಅವರು ತುಂಗಾಭದ್ರಾ ಹಿನ್ನೀರು ಯೋಜನೆ ಮೂಲಕ ಚಳ್ಳಕೆರೆ, ಮೊಳಕಾಲ್ಮುರು, ಪಾವಗಡ ಶಿರಾ ಕ್ಷೇತ್ರಕ್ಕೆ ಶಾಶ್ವತ ಕುಡಿಯುವ ನೀರಿನ ಯೋಜನೆಗಾಗಿ 2013 ರಲ್ಲಿ 2300 ಕೋಟಿಗೆ ಪ್ರಾಜೆಕ್ಟ್ ಮಾಡಿಸಿ ಎರಡ್ಮೂರು ತಿಂಗಳ ಪೂರ್ಣ ಕೆಲಸ ಮುಗಿದು ನೀರು ಹರಿಯಲು ಸಿದ್ದರಾಮಯ್ಯನವರೇ ನೇರವಾಗಿ ಕಾರಣರಾಗಿದ್ದು ಚಳ್ಳಕೆರೆ ಕ್ಷೇತ್ರ ಸೇರಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಜನರು ಸಿದ್ದರಾಮಯ್ಯ ಅವರ ಕೈ ಬಲಪಡಿಸಲು ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಅವರನ್ನು ಗೆಲ್ಲಿಸಲು ಕಂಕಣ ಬದ್ಧವಾಗಬೇಕು ಎಂದರು. ಬಿ.ಎನ್.ಚಂದ್ರಪ್ಪ ಅವರಿ ಕಾಂಗ್ರೆಸ್ ಪಕ್ಷದಿಂದ ಆಯ್ಕೆಯಾಗಿ ಸಂಸದರಾಗಿದ್ದ ಸಂದರ್ಭದಲ್ಲಿ ಅತ್ಯಂತ ಕ್ರಿಯಾಶೀಲವಾಗಿ ಕೆಲಸ ಮಾಡಿದ್ದಾರೆ.



ಜಿಲ್ಲಾ ಉಸ್ತುವಾರಿ ಡಿ.ಸುಧಾಕರ್ ಡಿ.ಸುಧಾಕರ್ ಮಾತನಾಡಿ ಪಕ್ಷೇತರರಾಗಿ ಹಿರಿಯೂರು ಕ್ಷೇತ್ರದಲ್ಲಿ ಐದು ವರ್ಷ ಅಭಿವೃದ್ಧಿ ಮಾಡಿದ್ದೇನೆ. 2013 ರಿಂದ 2018 ರ ವರೆಗೆ ಅಭಿವೃದ್ಧಿ ಮಾಡಲಾಗಿತ್ತು. ಬಿಜೆಪಿ ಸರ್ಕಾರ ಒಂದು ಭದ್ರಾ ಮೇಲ್ದಂಡೆ ಯೋಜನೆಯಲ್ಲಿ 8.5 ಟಿಎಂಸಿ ನೀರನ್ನು ಹಿರಿಯೂರು ಕ್ಷೇತ್ರಕ್ಕೆ ಸಿಂಹಪಾಲು ನೀಡಿದ್ದಾರೆ. ಲೋಕಸಭಾ ಕ್ಷೇತ್ರದಲ್ಲಿನ ಏಳು ಜನ ಕಾಂಗ್ರೆಸ್ ಶಾಸಕರು 2 ಲಕ್ಷ ಲೀಡ್ ಪಡೆದಿದ್ದೇವೆ. ಅದಕ್ಕಿಂತ ಹೆಚ್ಚಿನ ಲೀಡ್ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಅವರನ್ನು ಗೆಲ್ಲಿಸಲು ಕಾರ್ಯಕರ್ತರಲ್ಲಿ ಮನವಿ ಮಾಡಿದರು.

» **ಡಿ.ಸುಧಾಕರ್ ಜಿಲ್ಲಾ ಉಸ್ತುವಾರಿ ಸಚಿವ ಚಿತ್ರದುರ್ಗ ಜಿಲ್ಲೆ**



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



## ಫಾಸ್ಟ್ ನ್ಯೂಸ್

### ವ್ಯಕ್ತಿ ಕಾಣೆ

» ದಾವಣಗೆರೆ

ಕೆ.ಟಿ.ಜೆ ನಗರ ಪೊಲೀಸ್ ಠಾಣೆಯ ವ್ಯಾಪ್ತಿಯ ನಿಟ್ಟುವಳ್ಳಿಯ ಹೊಸ ಬಡಾವಣೆಯ ರಂಗನಾಥ.ಪಿ.ಟಿ ಬಿನ್ ತಿಪ್ಪೇಸ್ವಾಮಿ 45 ವರ್ಷ, ವೈಶ್ಯ ಜನಾಂಗದವರು ಇವರು ಕಳೆದ ದಿನಾಂಕ.4.2.23 ರಂದು ಬೆಳಿಗ್ಗೆ 11 ಗಂಟೆಗೆ ಕೆಲಸಕ್ಕೆ ಹೋದವನೂ ಇದೂವರೆಗೂ ಮನೆಗೂ ಬಾರದೇ ಕಾಣೆಯಾಗಿರುತ್ತಾರೆ. ಚಹರೆ ವಿವರ ಇಂತಿದೆ. ಎತ್ತರ 6 ಅಡಿ, ಗೋಧಿ ಮೈಬಣ್ಣ, ಸಾಧರಣ ಮೈಕಟ್ಟು, ದುಂಡು ಮುಖ ಹೊಂದಿರುತ್ತಾರೆ, ಹೋಗುವಾಗ ಬಿಳಿ ಬಣ್ಣದ ಅರ್ಧ ತೋಳಿನ ಅಂಗಿ ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ ಎಂದು ಕೆ.ಟಿ.ಜೆ ನಗರ ಪೊಲೀಸ್ ಠಾಣೆಯ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಬಕಾರಿ ಅಕ್ರಮ ಚಟುವಟಿಕೆಗಳ ಮೇಲೆ ನಿಗಾ, ವಿಚಕ್ಷಣಾ ದಳ ಚುರುಕು

» ದಾವಣಗೆರೆ

ಸಾರ್ವತ್ರಿಕ ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ದಾವಣಗೆರೆ ಜಿಲ್ಲಾ ವ್ಯಾಪ್ತಿಯಲ್ಲಿನ ಅಬಕಾರಿ ಇಲಾಖೆಯ ವಲಯ, ಉಪ ವಿಭಾಗ, ಜಿಲ್ಲಾ ವಿಚಕ್ಷಣ ದಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ವ್ಯಾಪ್ತಿಯಲ್ಲಿ ಅಬಕಾರಿ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟುವ ಸಲುವಾಗಿ ಜಾರಿ ಮತ್ತು ತನಿಖಾ ಕಾರ್ಯಗಳನ್ನು ಚುರುಕುಗೊಳಿಸಿ ದಾಳಿ ಕಾರ್ಯಗಳನ್ನು ನಡೆಸಲಾಯಿತು. ಲೋಕಸಭಾ ಚುನಾವಣೆ–2024 ನೀತಿ ಸಂಹಿತೆ ಜಾರಿಯಾದಾಗಿನಿಂದ ದಾಖಲಿಸಲಾದ ಮೊಕದ್ದಮೆಗಳು ಮತ್ತು ವಶಪಡಿಸಿಕೊಳ್ಳಲಾದ ಅಬಕಾರಿ ಪದಾರ್ಥಗಳ ವಿವರ: ಘೋರ–23, ಬಿಎಲ್‌ಸಿ–33, 15–ಎ–89 ಒಟ್ಟು 123 ಪ್ರಕರಣ ದಾಖಲಾಗಿರುತ್ತದೆ. 374.655 ಲೀಟರ್ ಮದ್ಯ, 12.530 ಲೀಟರ್ ಬಿಯರ್, 15 ದ್ವಿಚಕ್ರವಾಹನವನ್ನು ಜಪ್ತು ಮಾಡಲಾಗಿದೆ. ದಸ್ತಗಿರಿ ಮಾಡಿದ ಆರೋಪಿಗಳ ಸಂಖ್ಯೆ–123 ಜಪ್ತಿ ಮಾಡಲಾದ ಮದ್ಯ ಮತ್ತು ವಾಹನದ ಅಂದಾಜು ಮೌಲ್ಯ ರೂ.10,79,523 ಗಳಾಗಿರುತ್ತದೆ ಎಂದು ಅಬಕಾರಿ ಉಪ ಆಯುಕ್ತರಾದ ಟಿ.ವಿ.ಶೈಲಜಾ ತಿಳಿಸಿದ್ದಾರೆ.

### ಲೋಕಸಭಾ ಚುನಾವಣೆ: ವೀಕ್ಷಕರ ನೇಮಕ

» ಚಿತ್ರದುರ್ಗ

ಭಾರತ ಚುನಾವಣಾ ಆಯೋಗವು ಚಿತ್ರದುರ್ಗ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಮೂವರು ಹಿರಿಯ ಶ್ರೇಣಿ ಅಧಿಕಾರಿಗಳನ್ನು ಚುನಾವಣಾ ವೀಕ್ಷಕರನ್ನಾಗಿ ನೇಮಿಸಿ ಆದೇಶ ಹೊರಡಿಸಿದೆ. ಈ ಚುನಾವಣೆಯ ಸಾಮಾನ್ಯ ವೀಕ್ಷಕರಾಗಿ ಹಿರಿಯ ಐಎಎಸ್. ಅಧಿಕಾರಿ ಮನೋಹರ ಮರಾಂಡಿ – ಮೊ.8951198644 ಹಾಗೂ ಶಾಂತಿ–ಸುವ್ಯವಸ್ಥೆಯ (ಪೊಲೀಸ್) ವೀಕ್ಷಕರಾಗಿ ಹಿರಿಯ ಪೊಲೀಸ್ ಅಧಿಕಾರಿ ನಜ್ಮುಲ್ ಹೊಡ  ಮೊ.9113093298 ಇವರುಗಳನ್ನು ಆಯೋಗವು ನಿಯೋಜಿಸಿದೆ. ಸಾರ್ವಜನಿಕರು ಚುನಾವಣೆಗೆ ಸಂಬಂಧಿಸಿದ ದೂರುಗಳಿಗೆ ಸದರಿ ವೀಕ್ಷಕರನ್ನು ಅಥವಾ ಅವರ ಸಂಪರ್ಕಾಧಿಕಾರಿಗಳನ್ನು ಚಿತ್ರದುರ್ಗದ ಬಿ.ಡಿ.ರಸ್ತೆಯ ಪ್ರವಾಸಿ ಮಂದಿರದಲ್ಲಿ ಖುದ್ದಾಗಿ ಅಥವಾ ದೂರವಾಣಿ ಮೂಲಕ ಸಂಪರ್ಕಿಸಿ, ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

## ಚಿತ್ರದುರ್ಗ ಲೋಕಸಭಾ ಚುನಾವಣೆ: ನಾಮಪತ್ರ ಸಲ್ಲಿಕೆ ಮುಕ್ತಾಯ

# 19 ಅಭ್ಯರ್ಥಿಗಳಿಂದ 22 ನಾಮಪತ್ರ ಸಲ್ಲಿಕೆ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ನಾಮಪತ್ರ ಸಲ್ಲಿಕೆಗೆ ಅಂತಿಮ ದಿನವಾದ ಗುರುವಾರ 19 ಅಭ್ಯರ್ಥಿಗಳಿಂದ ಒಟ್ಟು 22 ನಾಮಪತ್ರಗಳು ಸಲ್ಲಿಕೆಯಾಗಿವೆ ಎಂದು ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ನಾಮಪತ್ರ ಸಲ್ಲಿಸಿದವರ ವಿವರ: ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಬಿ.ಎನ್. ಚಂದ್ರಪ್ಪ 3 ನಾಮಪತ್ರ, ಭಾರತೀಯ ಜನತಾ ಪಕ್ಷದ ಅಭ್ಯರ್ಥಿ ಗೋವಿಂದ ಕಾರಜೋಳ 2 ನಾಮಪತ್ರ ಸಲ್ಲಿಸಿದರು. ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಅಭ್ಯರ್ಥಿ ಬಿ.ವೆಂಕಟೇಶ್, ಉತ್ತಮ ಪ್ರಜಾಕೀಯ ಪಕ್ಷದ ಅಭ್ಯರ್ಥಿ ರಮೇಶ್‌ನಾಯ್ಕ್.ಟಿ, ಪಕ್ಷೇತರ ಅಭ್ಯರ್ಥಿಗಳಾಗಿ ಗಣೇಶ್, ತಿಮ್ಮಯ್ಯ, ಮಂಜುನಾಥ.ವಿಎಸ್., ತುಳಸಿ. ಹೆಚ್, ಆರ್.ದಾಸಪ್ಪ, ನಾಗರಾಜಪ್ಪ, ಭೂತರಾಜ.ವಿ.ಎಸ್, ಸುಧಾಕರ.ಆರ್, ಗೋವಿಂದನಾಯ್ಕ್.ಟಿ, ಕೆ.ಶಿವಲಿಂಗಪ್ಪ, ಎಂ.ಇ.ಸುಜಾತ, ಮಂಜುನಾಥಸ್ವಾಮಿ.ಟಿ, ಎಂ.ಪಿ.ದಾರಕೇಶ್ವರಯ್ಯ, ಅಮೃತ್‌ರಾಜ, ಶ್ರೀನಿವಾಸ.ಎಸ್.ಹೆಚ್ ಅವರು ತಲಾ ಒಂದು ನಾಮಪತ್ರ ಸಲ್ಲಿಸಿದ್ದಾರೆ.

ಚಿತ್ರದುರ್ಗ ಲೋಕಸಭಾ ಕ್ಷೇತ್ರ ಚುನಾವಣೆಗೆ ನಾಮಪತ್ರ ಸಲ್ಲಿಕೆಯ ಕೊನೆಯ ದಿನಾಂಕ ಮುಕ್ತಾಯವಾಗಿದ್ದು, ಚಿತ್ರದುರ್ಗ ಲೋಕಸಭಾ ಚುನಾವಣೆಗೆ 28 ಅಭ್ಯರ್ಥಿಗಳಿಂದ 36 ನಾಮಪತ್ರ ಸಲ್ಲಿಕೆಯಾಗಿರುತ್ತದೆ. ಏಪ್ರಿಲ್ 05ರಂದು ಬೆಳಿಗ್ಗೆ 11 ಗಂಟೆಗೆ ಚುನಾವಣಾಧಿಕಾರಿಗಳ ಕಾರ್ಯಾಲಯದಲ್ಲಿ ನಾಮಪತ್ರಗಳ ಪರಿಶೀಲನೆ ಕಾರ್ಯ ನಡೆಯಲಿದೆ.









### ಏಪ್ರಿಲ್ 26 ಮತದಾನದ ದಿನದಂದು ರಜಾ ಘೋಷಣೆ

» ಚಿತ್ರದುರ್ಗ

ಎರಡನೇ ಹಂತದ ಲೊಕಸಭೆ ಸಾರ್ವತ್ರಿಕ ಚುನಾವಣೆಗೆ ಏಪ್ರಿಲ್ 26 ರಂದು ಚಿತ್ರದುರ್ಗ ಜಿಲ್ಲೆಯಲ್ಲಿ ಮತದಾನ ಜರುಗಲಿದೆ. ಮತದಾನದ ದಿನವನ್ನು ಸಾರ್ವತ್ರಿಕ ರಜಾದಿನವನ್ನಾಗಿ ಘೋಷಣೆ ಮಾಡಲಾಗಿದೆ. ಅಂದು ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಕಂಪನಿಗಳು ಸಹ ಉದ್ಯೋಗಿಗಳಿಗೆ ರಜೆ ನೀಡಲಿವೆ. ಅಗತ್ಯ ಸೇವೆ ಹಾಗೂ ಮತದಾನ ಪ್ರಕ್ರಿಯಲ್ಲಿ ಕರ್ತವ್ಯ ನಿತರಾಗಿರುವ ಸಿಬ್ಬಂದಿ ಹೊರತು ಪಡಿಸಿ ಎಲ್ಲಾ ಅರ್ಹ ಮತದಾರರು ಏಪ್ರಿಲ್ 26 ರಂದು ಮತಗಟ್ಟೆಗಳಿಗೆ ತೆರಳಿ ತಪ್ಪದೇ ಮತದಾನ ಮಾಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕೋರಿದ್ದಾರೆ.

## ಭೋವಿ ಗುರುಪೀಠಕ್ಕೆ ಸಿಎಂ ಸಿದ್ದರಾಮಯ್ಯ ಭೇಟಿ

» ಚಿತ್ರದುರ್ಗ

ಕರ್ನಾಟಕ ಸರಕಾರದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಚಿತ್ರದುರ್ಗ ಶ್ರೀ ಜಗದ್ಗುರು ಸಿದ್ದರಾಮೇಶ್ವರ ಮಹಾಸಂಸ್ಥಾನ ಭೋವಿ ಗುರುಪೀಠಕ್ಕೆ ಭೇಟಿ ನೀಡಿದರು.

ಮುಖ್ಯಮಂತ್ರಿಗಳು ಭೇಟಿ ನೀಡಿ ಭೋವಿ ಗುರುಪೀಠದ ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ, ಕುಂಚಿಟಿಗ ಗುರುಪೀಠದ ಶ್ರೀ ಶಾಂತವೀರ ಸ್ವಾಮೀಜಿ ಭಗೀರಥ ಗುರುಪೀಠದ ಶ್ರೀ ಪುರುಷೋತ್ತಮಾನಂದ ಪರಿ ಸ್ವಾಮೀಜಿ ಯಾದವ ಗುರುಪೀಠದ ಶ್ರೀ ಕೃಷ್ಣಯಾದವಾನಂದ ಸ್ವಾಮೀಜಿ ಮಡಿವಾಳ ಗುರುಪೀಠದ ಶ್ರೀ ಬಸವ ಮಾಚಿದೇವ ಸ್ವಾಮೀಜಿ ಈಡಿಗ ಗುರುಪೀಠದ ಶ್ರೀ ರೇಣುಕಾನಂದ ಸ್ವಾಮೀಜಿ ಹಡಪದ ಗುರುಪೀಠದ ಶ್ರೀ ಅನ್ನದಾನಿ ಭಾರತಿ ಅಪ್ಪಣ್ಣ ಸ್ವಾಮೀಜಿ ಕುಂಬಾರ ಗುರುಪೀಠದ ಶ್ರೀ ಬಸವ ಕುಂಬಾರ ಗುಂಡಯ್ಯ ಸ್ವಾಮೀಜಿ ಮೇದಾರ ಗುರು ಪೀಠದ ಶ್ರೀ ಬಸವ ಪ್ರಭು ಇಮ್ಮಡಿ ಕೇತೇಶ್ವರ ಸ್ವಾಮೀಜಿ ಅಥಣಿ ಗಚ್ಚಿನಮಠದ ಶ್ರೀ ಶಿವಬಸವ ಸ್ವಾಮೀಜಿ ಕೊರಟಗೆರೆ ಅನ್ನಪೂರ್ಣೇಶ್ವರಿ ಮಠದ ಶ್ರೀ ಬಸವ ಮಹಾಲಿಂಗ ಸ್ವಾಮೀಜಿ ಶಿಕಾರಿಪುರ ವಿರಕ್ತಮಠದ ಶ್ರೀ ಚನ್ನಬಸವ ಸ್ವಾಮೀಜಿ ಶ್ರೀ ತಿಪ್ಪೇರುದ್ರ ಸ್ವಾಮೀಜಿ ಪೂಜ್ಯರ ಆಶೀರ್ವಾದ ಪಡೆದರು.ಈ ಸಂದರ್ಭದಲ್ಲಿ ಶಾಸಕರಾದ ವೀರೇಂದ್ರ ಪಪ್ಪಿ ಪಾವಗಡದ ವಿ ವೆಂಕಟೇಶ್ ಕಾಂಗ್ರೆಸ್ ಅಭ್ಯರ್ಥಿ ಬಿ ಎನ್ ಚಂದ್ರಪ್ಪ ನಿಗಮದ ಅಧ್ಯಕ್ಷ ಜಿಎಸ್ ಮಂಜುನಾಥ್ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ನೇರಲಗುಂಟೆ ರಾಮಣ್ಣ ಜಿಲ್ಲಾ ಭೋವಿ ಸಂಘದ ಅಧ್ಯಕ್ಷ ಚಿಕ್ಕಂದವಾಡಿ ತಿಪ್ಪಣ್ಣ, ಬಂಡೆ ರುದ್ರಪ್ಪ ಈ ಮಂಜುನಾಥ , ಹಿರಿಯೂರು ಕೃಷ್ಣಮೂರ್ತಿ ಈಶ್ವರಪ್ಪ ಚಳ್ಳಕೆರೆ ತಿಪ್ಪೇಸ್ವಾಮಿ ಕುಮಾರ್ ಉಪಸ್ಥಿತರಿದ್ದರು






ಹೊಳಲ್ಕೆರೆ ತಾಲ್ಲೂಕು ಆಡಳಿತ ಕಚೇರಿಯ ಮುಂದೆ ಬುಧವಾರ ತಹಶೀಲ್ದಾರ್ ಫಾತೀಮಾ ಬಿಬಿ ನೇತೃತ್ವದಲ್ಲಿ ಮಾತದಾನ ಜಾಗೃತಿ ಕಾರ್ಯಕ್ರಮ ನಡೆಸಲಾಯಿತು.

### ಹರಿಹರ ಸಹಾಯಕ ಚುನಾವಣಾಧಿಕಾರಿಗಳ ಕಚೇರಿಗೆ ಭೇಟಿ,

## ಚುನಾವಣಾ ಸಿದ್ದತೆ ಪರಿಶೀಲನೆ



» ದಾವಣಗೆರೆ

ಲೋಕಸಭಾ ಚುನಾವಣೆ ನಡೆಯುತ್ತಿದ್ದು ಏಪ್ರಿಲ್ 12 ರಿಂದ ನಾಮಪತ್ರ ಸಲ್ಲಿಕೆ ಅರಂಭವಾಗಲಿದೆ. ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಸಹಾಯಕ ಚುನಾವಣಾಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದು ಚುನಾವಣಾ ಸಿದ್ದತೆಯನ್ನು ಪರಿಶೀಲಿಸಲು ಬುಧವಾರ ಏ.3 ರಂದು ಹರಿಹರ ಸಹಾಯಕ ಚುನಾವಣಾಧಿಕಾರಿಗಳ ಕಚೇರಿಗೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಭೇಟಿ ನೀಡಿ ಪರಿಶೀಲಿಸಿದರು. ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ವಾರ್ ರೂಂ ಸ್ಥಾಪನೆ ಮಾಡುವ ಮೂಲಕ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿ ಮಾಡಲು ತಂಡಗಳನ್ನು ರಚಿಸಲಾಗಿದೆ. ಮತ್ತು ಎಲ್ಲಾ ತಂಡಗಳ ಕಾರ್ಯವೈಖರಿಯನ್ನು ವೀಕ್ಷಣೆ ಮಾಡಲು ನಿಯಂತ್ರಣ ಕೊಠಡಿ ಸ್ಥಾಪಿಸಲಾಗಿದ್ದು ಜಿ.ಪಿ.ಎಸ್.ಟ್ರಾಕಿಂಗ್ ಮಾಡಲಾಗುತ್ತಿದೆ. ಮತ್ತು ಮತದಾರರು ಹಾಗೂ ಸಾರ್ವಜನಿಕರು ಸಿವಿಜಿಲ್ ಮೂಲಕ ಹಾಗೂ ಸಹಾಯವಾಣಿಗೆ ಕರೆ ಮಾಡಿ ನೀತಿ ಸಂಹಿತೆ ಉಲ್ಲಂಘನೆ ಮತ್ತು ಮಾಹಿತಿ ನೀಡಲು ಕರೆ ಮಾಡಿದಾಗ ನಿರ್ವಹಣೆಗಾಗಿ ಕೈಗೊಂಡಿರುವ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಿದ ಚುನಾವಣಾಧಿಕಾರಿಗಳು ಇವಿಎಂ ಸ್ಟ್ರಾಂಗ್ ರೂಂ ಪರಿಶೀಲನೆಯನ್ನು ನಡೆಸಿದರು. ಈ ವೇಳೆ ಸಹಾಯಕ ಚುನಾವಣಾಧಿಕಾರಿ ಹಾಗೂ ಡಿಡಿಎಲ್‌ಆರ್ ಭಾವನ, ತಹಶೀಲ್ದಾರ್ ಗುರುಬಸವರಾಜ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು. ತುಂಗಭದ್ರಾ ನದಿ ನೀರು ಪರಿಶೀಲನೆ, ದಾವಣಗೆರೆ, ಹರಿಹರ ಜನರು ನಿರಾಳ; ಕಳೆದ ವರ್ಷ ಮುಂಗಾರು ಮಳೆ ಕೊರತೆಯಿಂದಾಗಿ ಭದ್ರಾ ಜಲಾಶಯ ಭರ್ತಿಯಾಗದ ಕಾರಣ ಭದ್ರಾ ಅಚ್ಚುಕಟ್ಟು ಪ್ರದೇಶದ ರೈತರಿಗೆ ಮತ್ತು ಜಿಲ್ಲೆಯ ಬಹುತೇಕ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳು ಇದರ ಮೇಲೆಯೇ ಅವಲಂಬಿತವಾಗಿದ್ದು ಕುಡಿಯುವ ನೀರಿನ ಸಮಸ್ಯೆಯಾಗಿತ್ತು.

## ಪ್ರಮುಖ ಸುದ್ದಿ

# ಚಂದ್ರಪ್ಪ 2 ಲಕ್ಷ ಅಂತರದಿಂದ ಗೆಲ್ತಾರೆ: ಸಿಎಂ ಸಿದ್ದರಾಮಯ್ಯ

» ಮೊದಲ ಪುಟದಿಂದ

**ಬಿಜೆಪಿ ರಾಜ್ಯಕ್ಕೆ ಮಾಡಿದ ದ್ರೋಹ ಒಂದಾ, ಎರಡಾ?**

**ಮೋದಿ ಮಹಾದ್ರೋಹಕ್ಕೆ ತಕ್ಕ ಪಾಠ ಕಲಿಸಿ:** ಬಿಜೆಪಿ ರಾಜ್ಯಕ್ಕೆ ಮಾಡಿದ ದ್ರೋಹ ಒಂದೆರಡಲ್ಲ. ರಾಜ್ಯಕ್ಕೆ ಪ್ರವಾಹ ಬಂದಾಗ, ಬರಗಾಲ ಬಂದಾಗ ರಾಜ್ಯದ ಜನರ ಕಡೆ ತಿರುಗಿ ಕೂಡ ನೋಡಲಿಲ್ಲ. ರಾಜ್ಯದ ಪಾಲಿನ ಬರಗಾಲದ ಅನುದಾನವನ್ನು ಒಂದು ರೂಪಾಯಿ ಕೂಡ ಕೊಡಲಿಲ್ಲ. ರಾಜ್ಯಕ್ಕೆ ಆದ ಅನ್ಯಾಯವನ್ನು ಬಿಜೆಪಿ ಸಂಸದರು ನೆಪಕ್ಕೂ ಪ್ರಶ್ನಿಸಲಿಲ್ಲ. ರಾಜ್ಯದ ನೀರಾವರಿಗೆ ಹಣ ಕೊಡ್ತೀವಿ ಅಂತ ಕೇಂದ್ರ ಬಜೆಟ್ ನಲ್ಲೂ ಘೋಷಿಸಿದರು. ಅದರಲ್ಲಿ ಒಂದು ರೂಪಾಯಿಯನ್ನೂ ನಮ್ಮ ರಾಜ್ಯಕ್ಕೆ ಕೊಡಲಿಲ್ಲ. ಮೇಲಿಂದ ಮೇಲೆ ರಾಜ್ಯಕ್ಕೆ ದ್ರೋಹ ಮಾಡುತ್ತಿರುವ ತಕ್ಕ ಪಾಠ ಕಲಿಸಿ ಎಂದರು.

**ಹಸಿ ಸುಳ್ಳುಗಾರ ಅಮಿತ್ ಶಾ:** ಖಖಖ ನಲ್ಲಿ ಈ ಃಎಕ ಯವರಿಗೆ ಸುಳ್ಳು ಹೇಳುವ ತರಬೇತಿ ಕೊಡ್ತಾರೆ. ಸುಳ್ಳಿನ ಮೇಲೆ ಸುಳ್ಳು ಹೇಳಿಕೊಂಡು ತಿರುಗ್ತಾ ಇದಾರೆ. ರಾಜ್ಯದ ಜನರ ಪಾಲಿನ ಬರಗಾಲದ ಹಣ ಏಕೆ ವಾಪಾಸ್ ಕೊಡಲಿಲ್ಲ ಎಂದು ನಾಡಿನ ಜನತೆ ಪ್ರಶ್ನೆ ಕೇಳಿದ್ರು. ಆದರೆ ರಾಜ್ಯ ಸರ್ಕಾರ 3 ತಿಂಗಳು ಲೇಟಾಗಿ ಮನವಿ ಮಾಡಿದ್ದಾಗಿ ಅಮಿತ್ ಶಾ ಭಯಾನಕ ಹಸಿ ಸುಳ್ಳು ಹೇಳಿದರು.

ಬಡವರ ರಕ್ತ ಕುಡಿಯುತ್ತಾ ನಾಚಿಕೆ, ಮಾನ, ಮರ್ಯಾದೆ ಇಲ್ಲ ಇವರಿಗೆ. ಇಷ್ಟು ಭೀಕರ ಬರಗಾಲ ಬಂದಿದ್ದರೂ ಒಂದೇ ಒಂದು ರೂಪಾಯಿ ರಾಜ್ಯದ ಪಾಲಿನ ಹಣ ಕೊಡದೆ ಸುಳ್ಳು ಹೇಳಿಕೊಂಡು ತಿರುಗ್ತೀರಲ್ಲಾ, ನಾಚಿಕೆ ಇಲ್ವಾ ಇವರಿಗೆ ಎಂದು ಖಾರವಾಗಿ ಪ್ರಶ್ನಿಸಿದರು.

ಶಿರಾ ಶಾಸಕ ಟಿ.ಬಿ.ಜಯಚಂದ್ರ ಮಾತನಾಡಿ ಚಿತ್ರದುರ್ಗ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಗೆಲ್ಲಿಸುವ ಜವಬ್ದಾರಿ ನಮ್ಮೆಲ್ಲರ ಹೊಣೆಯಾಗಿದೆ. ಸಂವಿಧಾನಕ್ಕೆ ಕೋಮುವಾದಿ ಪಕ್ಷದಿಂದ ಗಂಡಾಂತರ ಎದುರಾಗಿದೆ.ಪ್ರಜಾಪ್ರಭುತ್ವ ಉಳಿಸಲು ಕಾಂಗ್ರೆಸ್ ಪಕ್ಷದಿಂದ ಮಾತ್ರ ಸಾಧ್ಯವಾಗುತ್ತದೆ. ಭದ್ರಾ ಮೇಲ್ದಂಡೆ ಯೋಜನೆಯ ಕನಸು ನನಸಾಗಲು ಬಿ.ಎನ್.ಚಂದ್ರಪ್ಪ ಅವರನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದರು. ಕೇಂದ್ರ ಸರ್ಕಾರಕ್ಕರ ಕಳೆದ ಏಳು ವರ್ಷಗಳ ಹಿಂದೆ ಹಣಕ್ಕೆ ಮನವಿ ಮಾಡಿದ್ದರು ಸಹ ಒಂದು ರೂಪಾಯಿ ಕೊಟ್ಟಿಲ್ಲ. ಕಳೆದ ಬಾರಿ ಬಜೆಟ್ ನಲ್ಲಿ ಕೇಂದ್ರ ಸರ್ಕಾರ 5300 ಕೋಟಿ ಹಣ ನೀಡುತ್ತೇವೆ ಎಂದು ಘೋಷಿಸಿದ ನಿರ್ಮಾಲ ಸೀತಾರಾಮನ್ ಇದುವರೆಗೂ ಹಣ ಕೊಡದೇ ಕೇಂದ್ರ ಮಲತಾಯಿ ಧೋರಣೆ ಅನುಸರಿಸುತ್ತಿದೆ ಎಂದು ಕೇಂದ್ರದ ವಿರುದ್ಧ ವಾಗ್ದಾಳಿ ನಡೆಸಿದರು. ಶಾಸಕ ಎನ್. ವೈ.ಗೋಪಾಲಕೃಷ್ಣ ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ಯಾರಿಗೂ ತಪ್ಪಿಸಲು ಆಗಲ್ಲ. ಮೊಳಕಾಲ್ಮುರು ಕ್ಷೇತ್ರ ನಮಗೆ ಪ್ರತಿಷ್ಠೆ ಪ್ರಶ್ನೆಯಾಗಿದ್ದು ಅತಿ ಮತಗಳನ್ನು ನಾವು ಕೊಡಿಸುತ್ತೇವೆ.ಮತ ಹಾಕುವವರು ಬಿಸಿಲು ಅಂತ ಬಂದಿಲ್ಲ ,ನಾವು ಹಾಕಿಸುತ್ತೇವೆ ,ತಮ್ಮ ಸ್ವಾಭಿಮಾನಕ್ಕೆ ಧಕ್ಕೆ ಬರದಂತೆ ಅತ್ಯಂತ ಹೆಚ್ಚಿನ ಮತಗಳನ್ನು ನಮ್ಮಜಿಲ್ಲೆಯಿಂದ ಮತ್ತು ಮೊಳಕಾಲ್ಮುರು ಕ್ಷೇತ್ರದಿಂದ ನೀಡುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಅವರಿಗೆ ಅಭಯವನ್ನು ನೀಡಿದರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಮಾತನಾಡಿ ಕಾಂಗ್ರೆಸ್ ಪಕ್ಷ ಜನರಿಗೆ ಐದು ಗ್ಯಾರಂಟಿ ನೀಡಿ ಚುನಾವಣೆಯಲ್ಲಿ ನುಡಿದಂತೆ ನಡೆದಿದ್ದೇವೆ. ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಬಂದರೆ ಮತ್ತಷ್ಟು ಅಭಿವೃದ್ಧಿ ಸಹಕಾರಿಯಾಗುತ್ತದೆ. ನನಗೆ ಅತಿ ಹೆಚ್ಚು ಲೀಡ್ ನೀಡಿದಂತೆ ಕಾಂಗ್ರೆಸ್ ಅಭ್ಯರ್ಥಿ ಚಂದ್ರಪ್ಪ ಅವರಿಗೆ ಲೀಡ್ ನೀಡಿ ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಕಾರ್ಡ್ ನ್ನಯ ರಾಜ್ಯಾದ್ಯಂತ ಹಂಚುವ ಮೂಲಕ ಮೊದಲ ಕ್ಯಾಬಿನೆಟ್ ನಲ್ಲಿ ಪಾಸ್ ಮಾಡಿ ಜನರಿಗೆ ಪಂಚ ಗ್ಯಾರಂಟಿ ಜಾರಿ ಮಾಡಿದರು. ಕಾರ್ಯಕರ್ತರು ಪಂಚ ಗ್ಯಾರಂಟಿ ಯೋಜನೆ ಜನರಿಗೆ ತಿಳಿಸಿ ಮತಯಾಚನೆಯನ್ನು ಯಾವು ಅಂಜಿಕೆ ಇಲ್ಲದೇ ಕೇಳಿ ಎಂದು ತಿಳಿಸಿದರು. ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ವಿಧಾನ ಸಭಾ ಕ್ಷೇತ್ರದಲ್ಲಿ ಮತ ನೀಡಿದಂತೆ ಚಂದ್ರಪ್ಪ ಅವರಿಗೆ ಮತ ನೀಡಿ ಗೆಲ್ಲಿಸಲು ಶ್ರಮಿಸಬೇಕು ಎಂದು ಕಾರ್ಯಕರ್ತರಿಗೆ ಹುಮ್ಮಸ್ಸು ತುಂಬಿದರು. ಪಾವಗಡ ಶಾಸಕ ವೆಂಕಟೇಶ್ ಮಾತನಾಡಿ ಸಿದ್ದರಾಮಯ್ಯ ಅವರ ಆಶೀರ್ವಾದ ನಾವು 136 ಜನ ಆಯ್ಕೆಯಾಗಿದ್ದೇವೆ. ಏಷ್ಯಾದಲ್ಲಿ 2000 ಮೆಗಾವ್ಯಾಟ್ ಉತ್ಪಾದನೆ ಮಾಡುವಂತೆ ಮಾಡಿ ದೇಶದಲ್ಲಿ ಮಾಡಿದ ಕೀರ್ತಿ ಸಿದ್ದರಾಮಯ್ಯ ಅವರಿಗೆ ಸಲ್ಲುತ್ತದೆ. ಈಗ ಪಾವಗಡ ಜನತೆಯಿಂದ 1 ಲಕ್ಷ ಮತವನ್ನು ನೀಡುವ ಮೂಲಕ ಚಂದ್ರಪ್ಪ ಗೆಲುವಿಗೆ ಶ್ರಮಿಸುತ್ತೇನೆ. ಪಾವಗಡದಲ್ಲಿ ಜೆಡಿಎಸ್ ಮುಗಿಸುವ ಕೆಲಸ ನಾನು ಮಾಡುತ್ತೇನೆ.ಈ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಹೆಚ್. ಆಂಜನೇಯ, ಮಾಜಿ ಶಾಸಕ ಉಮಾಪತಿ, ಸಲಿಂಗಯ್ಯ, ಆಗ್ನೇಯ ಪದವೀಧರ ಕ್ಷೇತ್ರದ ಅಭ್ಯರ್ಥಿ ಶ್ರೀನಿವಾಸ್, ಕಾರ್ಮಿಕ ಅಸಂಘಟಿತ ಸಂಘದ ರಾಜ್ಯಧ್ಯಕ್ಷ ಜಿ.ಎಸ್. ಮಂಜುನಾಥ್, ಮುಖಂಡರಾದ ಸರ್ದಾರ್, ಪಿ. ಸವಿತಾ ರಘು, ಶಿವಯಯಾದನ್ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ತಾಜ್ ಪೀರ್ ಎಲ್ಲಾರನ್ನು ಸ್ವಾಗತಿಸಿದರು.





### ಸಂಸದ ನಾರಾಯಣಸ್ವಾಮಿ 5 ವರ್ಷ ಸುಳ್ಳು ಹೇಳುವ ಕೆಲಸ ಮಾಡಿದರು: ಪೂರ್ಣಿಮಾ

ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮತ್ತು ಮಾಜಿ ಶಾಸಕಿ ಪೂರ್ಣಿಮಾ ಶ್ರೀನಿವಾಸ್ ಮಾತನಾಡಿ ಕಳೆದ ಬಾರಿ ಸಂಸದರಾಗಿದ್ದ ನಾರಾಯಣಸ್ವಾಮಿ ಅವರು ಅಪ್ಪರ್ ಭದ್ರಾ ಯೋಜನೆ 5300 ಕೋಟಿ ಹಣ ತರುತ್ತೇವೆ, ರಾಷ್ಟ್ರೀಯ ಯೋಜನೆ ಮಾಡಿಸುತ್ತೇನೆ ಎಂದು ಸುಳ್ಳು ಹೇಳಿ ಐದು ವರ್ಷ ಕಾಲ ಕಾಲಹರಣ ಮಾಡಿದರು.ಚಿತ್ರದುರ್ಗ ಕೋಟೆ ಅಭಿವೃದ್ಧಿ ಅನುದಾನ ತರುತ್ತೇನೆ ಸುಂದರವಾಗಿ ಕಾಣಲು ಅಗತ್ಯ ಹಣ ಮತ್ತು ಮೂಲ ಸೌಲಭ್ಯ ಒತ್ತು ಎಂದು ಶೌಚಾಲಯ ಕಟ್ಟಿಸಲು ಅವರಿಗೆ ಸಾಧ್ಯವಾಗಲಿಲ್ಲ, ಕೋಟೆ ವಿಕ್ಷಣೆಗೆ ಬಂದಿದ್ದ ಪ್ರವಾಸಿಗರು ಸಂಸದರಿಗೆ ತರಾಟೆಗೆ ತೆಗೆದುಕೊಂಡ ಘಾನೆ ಸಹ ನಡೆದಿದೆ. ಮದಕರಿಥೀಮ್ ಪಾರ್ಕ್ ಮಾಡುತ್ತೇನೆ ಎಂದು ಹೇಳಿ ಕೊನೆಗೆ ಜಾಗ ಸಹ ಗುರುತಿಸದೇ ಸುಳ್ಳುಗಳ ಸರಮಾಲೆ ಜೋಡಿಸಿದರು. ಕೇಂದ್ರದ ಪ್ರಧಾನಿಗಳು ಯಾರಗೂ ಹಣ ತಿನ್ನಲು ಬಿಡುವುದಿಲ್ಲ, ನಾನು ತಿನ್ನುವುದಿಲ್ಲ ಎನ್ನುತ್ತಲೇ 6300 ಕೋಟಿ ಎಲೆಕ್ಟೋಲ್ ಬಾಂಡ್ ಹಗರಣದಲ್ಲಿ ಕೇಂದ್ರ ಸರ್ಕಾರ ಭಾಗಿಯಾಗಿದ್ದು ಹೇಗೆ ಎಂದು ಪ್ರಶ್ನಿಸಿದರು. ದುರ್ಗಕ್ಕೆ ಕೇಂದ್ರ ಸರ್ಕಾರದ ಮತ್ತು ಸಂಸದ ನಾರಾಯಣಸ್ವಾಮಿ ಕೊಡುಗೆ ಏನು ಎಂದು ಕೇಂದ್ರ ಸರ್ಕಾರ ವಿರುದ್ದ ಮಾತಿನ ಚಾಟಿ ಬೀಸಿದರು. ಜಾತಿ ಜಾತಿಗಳ ನಡುವೆ ವಿಷಬೀಜ ಬಿತ್ತುವ ಮತ್ತು ಜಾತಿಗಳ ಮಧ್ಯೆ ಕೋಮು ಗಲಭೆ ಮಾಡುವಂತಹ ಪಕ್ಷಕ್ಕೆ ಮತ್ತು ಅಭ್ಯರ್ಥಿಗೆ ಮತ ಹಾಕದೇ ಸಭ್ಯ ಮತ್ತು ಸರಳ ಸಜ್ಜನಿಕೆ ವ್ಯಕ್ತಿ ಚಂದ್ರಪ್ಪ ಅವರನ್ನು ಗೆಲ್ಲಿಸುವಂತಹ ಕೆಲಸ ಮಾಡಬೇಕು ಎಂದು ಕಾರ್ಯಕರ್ತರಿಗೆ ಸಂದೇಶ ರಾವನಿಸಿದರು.

## ಫಾಸ್ಟ್ ನ್ಯೂಸ್

### ಮತದಾನ ಜಾಗೃತಿ: ವಿಕಲಚೇತನರಿಂದ ಬೈಕ್ ರ್ಯಾಲಿ ಏಪ್ರಿಲ್ 6ರಂದು

» **ಚಿತ್ರದುರ್ಗ**

ಲೋಕಸಭಾ ಸಾರ್ವತ್ರಿಕ ಚುನಾವಣೆ–2024 ರ ಸಂಬಂಧ ಮತದಾನ ಬಗ್ಗೆ ಜಾಗೃತಿ ಹಾಗೂ ಅರಿವು ಮೂಡಿಸಲು ಏ. 6 ರಂದು ಬೆಳಿಗ್ಗೆ 9.30 ಗಂಟೆಗೆ ವಿಕಲಚೇತರಿಂದ ಬೈಕ್ ರ್ಯಾಲಿ ಹಮ್ಮಿಕೊಳ್ಳಲಾಗಿದೆ. ಬೈಕ್ ರ್ಯಾಲಿಯಲ್ಲಿ ಗ್ರಾಮೀಣ, ನಗರ, ಪುನರ್ವಸತಿ ಕಾರ್ಯತರು ಹಾಗೂ ವಿಕಲಚೇತನರು ಭಾಗಹಿಸುವರು. ರ್ಯಾಲಿಗೆ ಜಿಲ್ಲಾಧಿಕಾರಿ ಹಾಗೂ ಜಿ.ಪಂ.ಸಿಇಓ ಚಾಲನೆ ನೀಡುವರು. ರ್ಯಾಲಿಯು ಜಿಲ್ಲಾಧಿಕಾರಿಗಳ ಕಛೇರಿ ವೃತ್ತದಿಂದ ಆರಂಭಗೊಂಡು ಹೊಳಲ್ಕೆರೆ ರಸ್ತೆಯ ಸಂಗೊಳ್ಳಿರಾಯಣ್ಣ ವೃತ್ತ ಬಳಸಿ ಮರಳಿ ಜಿಲ್ಲಾಧಿಕಾರಿ ಕಚೇರಿವರೆಗೆ ಆಗಮಿಸಲಿದೆ ಎಂದು ತಾ.ಪಂ. ಇಓ ಅನಂತರಾಜು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹಿರೇಮಧುರೆ ಗ್ರಾಮದ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ ಒದಗಿಸಿದ ತಾಲ್ಲೂಕು ಆಡಳಿತ

» **ಚಳ್ಳಕೆರೆ**

ಗ್ರಾಮೀಣ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ನಿತ್ಯ ಜೀವನಕ್ಕೆ ಅವಶ್ಯಕವಾಗಿ ಬೇಕಾದ ಕುಡಿಯುವ ನೀರಿನ ಅಭಾವ ಉಂಟಾದಾಗ ಅಲ್ಲಿನ ಖಾಸಗಿಯವರಿಂದಲೇ ನೀರನ್ನು ಪಡೆದು ಸಾರ್ವಜನಿಕರಿಗೆ ವಿತರಣೆ ಮಾಡಬೇಕೆಂದು ಸರ್ಕಾರ ಈಗಾಗಲೇ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ. ತಾಲ್ಲೂಕಿನ ಸೋಮಗುದ್ದು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಿರೇಮಧುರೆ ಗ್ರಾಮದಲ್ಲಿ ಕಳೆದ ಕೆಲವು ದಿನಗಳಿಂದ ಕುಡಿಯುವ ನೀರಿನ ತೊಂದರೆ ಉಂಟಾಗಿತ್ತು. ಅಲ್ಲಿನ ಗ್ರಾಮಸ್ಥರು ಕುಡಿಯುವ ನೀರಿಗೆ ಬವಣೆ ಪಡುತ್ತಿದ್ದರು. ಇತ್ತೀಚೆಗೆ ತಾಲ್ಲೂಕು ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಿಷಯ ಪ್ರಸ್ತಾವನೆಯಾಗಿತ್ತು. ಹಿರೇಮಧುರೆ ಗ್ರಾಮದ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸುವ ನಿಟ್ಟಿನಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಬಿ.ಎಸ್.ಲಕ್ಷ್ಮಣ್, ತಹಶೀಲ್ದಾರ ರೇಹಾನ್‌ಪಾಷ ಗ್ರಾಮದ ಮುಖಂಡರೊಡನೆ ಚರ್ಚೆ ನಡೆಸಿ ಕುಡಿಯುವ ನೀರು ಒದಗಿಸುವಂತೆ ಮನವಿ ಮಾಡಿದರು. ತಹಶೀಲ್ದಾರ್ ಸೂಚನೆಯಂತೆ ಸ್ಥಳಕ್ಕೆ ಭೇಟಿ ನೀಡಿದ್ದ ಕಂದಾಯಾಧಿಕಾರಿ ಲಿಂಗೇಗೌಡ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗೌತಮಿ, ಗ್ರಾಮ ಲೆಕ್ಕಾಧಿಕಾರಿ ಹಿರೇಮಧುರೆ ಗ್ರಾಮದ ಖಾಸಗಿ ವ್ಯಕ್ತಿಯ ಜಮೀನಿನ ಕೊಳವೆಬಾವಿಯಲ್ಲಿ ಸಾಕಷ್ಟು ನೀರಿನ ಪ್ರಮಾಣವಿದ್ದು, ಆತನನ್ನು ಮನವಲಿಸಿ ಪ್ರತಿನಿತ್ಯ ಸಾರ್ವಜನಿಕರಿಗೆ ಕುಡಿಯುವ ನೀರು ನೀಡುವಂತೆ ತಾಕೀತು ಮಾಡಿದರು. ಜಮೀನಿನ ಮಾಲೀಕರು ಸಹ ಒಪ್ಪಿಗೆ ಸೂಚಿಸಿ ಗ್ರಾಮಕ್ಕೆ ನೀರು ಕೊಡಲು ತಾಲ್ಲೂಕು ಆಡಳಿತದೊಂದಿಗೆ ಸಹಕರಿಸುವ ಭರವಸೆ ನೀಡಿದರು.

### ಅಬಕಾರಿ ಇಲಾಖೆ ಕಾರ್ಯಾಚರಣೆ: ರೂ.1.29 ಕೋಟಿ ಮೌಲ್ಯದ ಮದ್ಯ ವಶ

» **ಚಿತ್ರದುರ್ಗ**

ಸಾರ್ವತ್ರಿಕ ಲೋಕಸಭೆ ಚುನಾವಣೆ ನೀತಿ ಸಂಹಿತೆ ಹಿನ್ನಲೆಯಲ್ಲಿ ಅಬಕಾರಿ ಇಲಾಖೆಯಿಂದ ಹೆಚ್ಚಿನ ಕಾರ್ಯಾಚರಣೆ ನಡೆಸಿ ಜಿಲ್ಲೆಯಾದ್ಯಂತ ರೂ.1.29 ಕೋಟಿ ರೂಪಾಯಿಗಳ ಅಕ್ರಮ ಮದ್ಯ ವಶಪಡಿಸಿಕೊಳ್ಳಲಾಗಿದೆ. ಅಕ್ರಮ ಮದ್ಯ ಮಾರಾಟ, ಸಾಗಾಣಿಕೆ ಹಾಗೂ ಮದ್ಯ ಹಂಚುವುದನ್ನು ತಡೆಯಲು ಅಬಕಾರಿ ಇಲಾಖೆಯಿಂದ ಜಿಲ್ಲೆಯಾದ್ಯಂತ 9 ತಂಡ ರಚನೆ ಮಾಡಲಾಗಿದೆ. ಇದರೊಂದಿಗೆ ಗಡಿ ರಾಜ್ಯ ಆಂಧ್ರಪ್ರದೇಶಕ್ಕೆ ಹೊಂದಿಕೊಂಡಿರುವ ಜಿಲ್ಲೆಯ ಅಂತರಾಜ್ಯ ಗಡಿ ಪ್ರದೇಶಗಳಾದ ಹಿರಿಯೂರು ತಾಲ್ಲೂಕು ಮದ್ದಿಹಳ್ಳಿ, ಚಳ್ಳಕೆರೆ ತಾಲ್ಲೂಕಿನ ದೊಡ್ಡಬಾದಿಹಳ್ಳಿ, ಮೊಳಕಾಲ್ಮೂರು ತಾಲ್ಲೂಕಿನ ಎದ್ದುಲಬೊಮ್ಮನಹಟ್ಟಿಯಲ್ಲಿ 3 ಅಬಕಾರಿ ತನಿಖಾ ತಂಡಗಳನ್ನು ರಚಿಸಿ ಕಾರ್ಯನಿರ್ವಹಿಸಲಾಗುತ್ತಿದೆ. ಮಾ. 16 ರಿಂದ ಏ.2 ರವರೆಗೆ ಜಿಲ್ಲೆಯಲ್ಲಿ 27 ಘೋರ ಪ್ರಕರಣಗಳು, ಸಾರ್ವಜನಿಕ ಸ್ಥಳಗಳಲ್ಲಿ ಮದ್ಯ ಸೇವನೆಗೆ ಅವಕಾಶ ಕಲ್ಪಿಸಿದ ಆರೋಪದಡಿಯಲ್ಲಿ 227 ಪ್ರಕರಣಗಳು, ಜಿಲ್ಲೆಯ ವಿವಿಧ ಬಗೆಯ ಮದ್ಯದಂಗಡಿಯಲ್ಲಿ ಸನ್ನದು, ಷರತ್ತುಗಳ ಉಲ್ಲಂಘನೆಗಾಗಿ 22 ಪ್ರಕರಣಗಳು ದಾಖಲಿಸಲಾಗಿದೆ. ಈ ಎಲ್ಲಾ ಪ್ರಕರಣಗಳಿಮದ 258 ಆರೋಪಿಗಳನ್ನು ದಸ್ತಗಿರಿಗೊಳಿಸಲಾಗಿದೆ. 22,452 ಲೀಟರ್ ಮದ್ಯ, 25 ಲೀಟರ್ ಬೀಯರ್, 6 ಲೀಟರ್ ಸೇಂದಿಯನ್ನು ಹಾಗೂ ಮದ್ಯ ಸಾಗಾಣಿಕೆಗಾಗಿ ಬಳಸಲಾದ 22 ದ್ವಿಚಕ್ರ ಮತ್ತು 1 ನಾಲ್ಕು ಚಕ್ರದದ ವಾಹನವನ್ನು ಜಪ್ತಿ ಮಾಡಲಾಗಿದೆ. ಅಕ್ರಮ ಮದ್ಯ ದಾಸ್ತಾನು ಸಂಗ್ರಹಣೆ, ಸಾಗಾಣಿಕೆ, ಮಾರಾಟ ವಿತರಣೆ ಮುಂತಾದ ಚುನಾವಣಾ ಅಬಕಾರಿ ಅಕ್ರಮಗಳು ಕಂಡು ಬಂದಲ್ಲಿ ಅಬಕಾರಿ ಇಲಾಖೆಯ ಟೋಲ್ ಫ್ರೀ ನಂಬರ್ 18004253521 ಗೆ ಕರೆ ಮಾಡಿ ಮಾಹಿತಿ ನೀಡಬಹುದು ಎಂದು ಅಬಕಾರಿ ಉಪ ಆಯುಕ್ತ ಡಾ.ಬಿ. ಮಾದೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮತದಾನ ಪ್ರೇರೇಪಿಸುವ ವಿಶಿಷ್ಟ ಸಂಯೋಜನೆ ಹಾಡು

# ನಾ ಭಾರತೀಯ, ಭವ್ಯ ಭಾರತಕ್ಕಾಗಿ ನನ್ನ ಮತ



### ವಿಡಿಯೋ ವಾಹನಕ್ಕೆ ಚಾಲನೆ

"ನಾ ಭಾರತ, ಭಾರತ ನನ್ನಲ್ಲಿ" ಕನ್ನಡ ವಿಡಿಯೋ ಗೀತೆಯ ಪ್ರಚಾರದ ಎಲ್.ಇ.ಡಿ ವಾಹನಕ್ಕೆ ಮಂಗಳವಾರ ಸಂಜೆ ಚಿತ್ರದುರ್ಗ ನಗರದ ಒನಕೆ ಓಬವ್ವ ವೃತ್ತದಲ್ಲಿ ಚಾಲನೆ ನೀಡಲಾಯಿತು. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹಾಗೂ ಜಿ.ಪಂ ಸಿಇಓ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಎಸ್.ಜೆ.ಸೋಮಶೇಖರ್ ವಿಡಿಯೋ ಪ್ರಚಾರದ ವಾಹನಕ್ಕೆ ಹಸಿರು ನಿಶಾನೆ ತೋರಿದರು. ವಿಡಿಯೋ ಪ್ರಚಾರದ ವಾಹನ ನಗರದ ಮಹಾತ್ಮ ಗಾಂಧಿ ವೃತ್ತ, ಸಂಗೊಳ್ಳಿ ರಾಯಣ್ಣ ವೃತ್ತ, ಕನಕ ವೃತ್ತ, ರಂಗಯ್ಯ ಬಾಗಿಲು, ತಿಪ್ಪಜ್ಜಿ ಸರ್ಕಲ್, ಕೆಳಗೋಟೆ, ಸ್ಟೇಡಿಯಂ, ಚಳ್ಳಕೆರೆ ವೃತ್ತ ಸೇರಿದಂತೆ ಚಿತ್ರದುರ್ಗ ನಗರದಾದ್ಯಂತ ಸಂಚರಿಸಿ, ಪ್ರಚಾರ ಕಾರ್ಯ ನಡೆಸಿತು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ಪರಮೇಶ್ವರಪ್ಪ, ಅಧಿಕಾರಿಗಳು ಇದ್ದರು.

» **ಚಿತ್ರದುರ್ಗ**

ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಭಾರತೀಯ ಚುನಾವಣಾ ಆಯೋಗ ಮತದಾನವನ್ನು ಪ್ರೇರೇಪಿಸುವ ವಿಶಿಷ್ಟ ಸಂಯೋಜನೆಯ ವಿಡಿಯೋ ಹಾಡನ್ನು ಬಿಡುಗಡೆ ಮಾಡಿದೆ.

ಹಿಂದಿ, ಬೆಂಗಾಲಿ, ಮರಾಠಿ, ಗುಜರಾತಿ, ಪಂಜಾಬಿ, ತಮಿಳು, ತೆಲುಗು, ಕನ್ನಡ, ಮಲೆಯಾಳಂ, ಅಸ್ಸಾಮಿ, ಒಡಿಯಾ, ಕಾಶ್ಮೀರಿ, ಸಂತಾಲಿ ಭಾಷೆಗಳೆಲ್ಲವನ್ನೂ ಒಂದೇ ಹಾಡಿನಲ್ಲಿ ಬಳಸಲಾಗಿದೆ. ಇದರೊಂದಿಗೆ ದೇಶದ ವೈವಿಧ್ಯತೆ ಎತ್ತಿತೋರಿಸುವ ವಿಡಿಯೋ ಚಿತ್ರಿಕರಣ ನೋಡುಗರ ಕಣ್ಮನ ಸೆಳೆಯುತ್ತಿದೆ. ಮುಂಬಯಿ ವಿಸ್ಲಿಂಗ್ ವುಡ್ಸ್ ಇಂಟರ್ ನ್ಯಾಷಿನಲ್ ಸ್ಕೂಲ್ ಆಫ್ ಮ್ಯೂಜಿಕ್ ಸಹಯೋಗದಲ್ಲಿ ಖ್ಯಾತ ಚಲನಚಿತ್ರ ನಿರ್ಮಾತೃ, ನಿರ್ದೇಶಕ ಸುಭಾಷ್ ಗಾಯಾ ಗೀತೆ ಬರೆದು ರಾಗ ಸಂಯೋಜನೆ ಮಾಡಿದ್ದಾರೆ. ಖ್ಯಾತ ಗಾಯಕರಾದ ಕವಿತಾ ಕೃಷ್ಣಮೂರ್ತಿ, ಸುಧಿತಿ ಚೌವ್ಹಾಣ್, ಕೆ.ಎಸ್.ಚಿತ್ರ, ಮನು, ಸುಖವಿಂದರ್ ಸಿಂಗ್, ಜಾವಿದ್ ಅಲಿ, ಸೋನು ನಿಗಮ್, ವಿಜಯ್ ಪ್ರಕಾಶ್, ವಿಜಯ್ ಯೇಸುದಾಸ್ ಸೇರಿದಂತೆ 18 ಖ್ಯಾತ ಗಾಯಕರು ಗೀತೆಯನ್ನು ಸುಶ್ರಾವ್ಯವಾಗಿ ಹಾಡಿದ್ದಾರೆ.

ಇದೇ ಮಾದರಿಯಲ್ಲಿ ಕರ್ನಾಟಕ ಚುನಾವಣಾ ಆಯೋಗವು ಸಹ ಮತದಾನವನ್ನು ಪ್ರೇರೇಪಿಸುವ ಸಲುವಾಗಿ ರಾಜ್ಯದ ಐತಿಹಾಸಿಕ, ಪಾರಂಪರಿಕ, ಭೌಗೋಳಿಕ ಹಾಗೂ ಸಾಂಸ್ಕೃತಿಕ ವೈವಿಧ್ಯತೆಯನ್ನು ಬಿಂಬಿಸುವ "ನಾ ಭಾರತ, ಭಾರತ ನನ್ನಲ್ಲಿ, ನಾ ಜಾಗೃತ, ಜಾಗೃತಿ ನನ್ನಲ್ಲಿ" ಗೀತೆ ಬಿಡುಗಡೆ ಮಾಡಿದೆ. ಭವ್ಯ ಭಾರತಕ್ಕಾಗಿ ಮತದಾನ ಮಾಡುವ ಮಹತ್ವನ್ನು ಗೀತೆಯಲ್ಲಿ ಸಾರಲಾಗಿದೆ.

ಖ್ಯಾತ ಗಾಯಕರಾದ ರಾಜೇಶ್ ಕೃಷ್ಣನ್, ಶ್ರೀಧರ್ ಕೋಟೆ, ಸಂಗೀತಾ ಕಟ್ಟಿ, ನವೀನ್ ಸಜ್ಜು, ಅನನ್ಯ ಭಟ್, ಎಂ.ಆರ್.ಶ್ರೀಹರ್ಷ,ಕಂಬದ ರಂಗಯ್ಯ, ಗುರುಕಿರಣ್, ನಂದಿತಾ, ನಿಖಿಲ್ ಪಾರ್ಥ ಸಾರಥಿ,ಚೇತನ್‌ನಾಯಕ್,ಎಂ.ಡಿ.ಪಲ್ಲವಿ, ಮಂಜುಳ ಗುರುರಾಜ್, ವಿ.ಮನೋಹರ್ ಗೀತೆಯನ್ನು ಹಾಡಿದ್ದಾರೆ.

ಇದರೊಂದಿಗೆ ನಟ ನಟಿಯರಾದ ಸುಧಾರಾಣಿ, ಶರಣ್, ಪ್ರೇಮ, ರಂಗಾಯಣ ರಘು, ಅಜಯ್ ರಾವ್, ನವೀನ್ ಶಂಕರ್, ಹರ್ಷಿಕಾ ಪೂಣಚ್ಚ, ಕ್ರಿಕೆಟ್ ಆಟಗಾರರಾದ ರಾಹುಲ್ ದ್ರಾವಿಡ್, ಅನಿಲ್ ಕುಂಬ್ಳೆ, ಜಾವಗಲ್ ಶ್ರೀನಾಥ್ ಸಹ ಗೀತೆಯ ಮೂಲಕ ಮತದಾನದ ಮಹತ್ವ ಸಾರಿದ್ದಾರೆ. ಇವರೊಂದಿಗೆ ನಾಡಿನ ಮೇರು ವ್ಯಕ್ತಿಗಳು, ಪದ್ಮಶ್ರೀ ಪುರಸ್ಕೃತರು ಸಹ ಮತದಾನ ಸಂದೇಶಕ್ಕೆ ಕೈ ಜೋಡಿಸಿದ್ದಾರೆ.

ನಾಡಿನ ಪ್ರೇಕ್ಷಣೀಯ ಹಾಗೂ ಐತಿಹಾಸಿಕ ಸ್ಥಳಗಳಲ್ಲಿ ಹಾಡಿನ ಚಿತ್ರಿಕರಣ ಮಾಡಲಾಗಿದೆ. ಚಿತ್ರದುರ್ಗದ ಐತಿಹಾಸಿಕ ಕೋಟೆಯಲ್ಲಿ ಸಹ ಚಿತ್ರಿಕರಣ ಮಾಡಿದ್ದು, ನಗರದ ಬಾಲಕಿಯರ ಸರ್ಕಾರಿ ಪಿಯು ಕಾಲೇಜು, ಕಂಪಳ ರಂಗ ಸ್ಕೂಲ್ ವಿದ್ಯಾರ್ಥಿಗಳು ಹಾಡಿನಲ್ಲಿ ನೃತ್ಯ ಮಾಡಿದ್ದಾರೆ.ಹಿಂದಿ ಹಾಗೂ ಕನ್ನಡ ಗೀತೆಗಳನ್ನುಈಕೆಳಗಿನಲಿಂಕ್‌ಗಳನ್ನುಬಳಸಿ ಯೂಟ್ಯೂಬ್‌ನಲ್ಲಿ ನೋಡಬಹುದಾಗಿದೆ. https://www.youtube.com/watch?v=to324JIljf8 https://youtu.be/Q5j5dHrYuyI?si=NLSv9w52sDOUpmK3

## ಬಿಸಿಲಾಘಾತದ ಬಗ್ಗೆ ಜಾಗೃತಿ ಇರಲಿ: ಟಿ.ಹೆಚ್.ಓ

» **ಚಿತ್ರದುರ್ಗ**

ಈ ಬಾರಿ ಬೇಸಿಗೆ ಕಾಲದ ಉಷ್ಣಾಂಶ ಹೆಚ್ಚಾಗಿದೆ. ಬಿಸಿಲಾಘಾತದ ಬಗ್ಗೆ ಜಾಗೃತಿಯಿಂದ ಇರಬೇಕು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಬುಧವಾರ ಗುಡ್ಡದ ರಂಗವ್ವನಹಳ್ಳಿ ಗ್ರಾಮದಲ್ಲಿ ಆಯೋಜಿಸಲಾದ ಬಿಸಿಲಾಘಾತದ ಬಗ್ಗೆ ಮುನ್ನೆಚ್ಚರಿಕೆಯ ಮಾಹಿತಿ ಶಿಕ್ಷಣ ಕಾರ್ಯಕ್ರಮದಲ್ಲಿ ಮಾತನಾಡಿದರು.

ಬಿಸಿಯಾದ ಗಾಳಿ ಶಾಖ ತರಂಗಗಳಿಂದ ಸಾರ್ವಜನಿಕರು ಎಚ್ಚರಿಕೆ ವಹಿಸಬೇಕು. ಶಾಖ ತರಂಗಗಳು ಆರೋಗ್ಯದ ಮೇಲೆ ತೀವ್ರ ಪರಿಣಾಮ ಬೀರುತ್ತವೆ. ಹೆಚ್ಚು ನೀರು ಕುಡಿಯುಬೇಕು. ಬಾಯಾರಿಕೆ ಇಲ್ಲದಿದ್ದರೂ ಸಹ ಹೆಚ್ಚು ಹೆಚ್ಚು ನೀರನ್ನು ಆಗಾಗ ಕುಡಿಯುತ್ತಿರಬೇಕು. ಬಾಯರಿಕೆ ನಿರ್ಜಲೀಕರಣದ ಲಕ್ಷಣವಾಗಿರುತ್ತದೆ. ಉಪ್ಪು ಸಕ್ಕರೆ ದ್ರಾವಣ ಕುಡಿದು ಪುನರ್ಜಲೀಕರಣ ಮಾಡಿಕೊಳ್ಳಬೇಕು, ಕೆಲಸಗಳನ್ನು ಬೆಳಿಗ್ಗೆ ಸಾಯಂಕಾಲ ತಂಪಿನ ಸಮಯದಲ್ಲಿ ಮಾಡಿಕೊಳ್ಳಬೇಕು. ವಿನಾ ಕಾರಣ ಬಿಸಿಲಿನಲ್ಲಿ ಸುತ್ತಾಡಬಾರದು ಶರೀರವನ್ನು ಸುರಕ್ಷಿತವಾಗಿ



ಇಟ್ಟುಕೊಳ್ಳಬೇಕು. ಬಿಸಿ ಗಾಳಿಯ ಒತ್ತಡ ಹಾಗು ಬಿಸಿ ಗಾಳಿಗೆ ಸಂಬಂಧಿಸಿದ ಆರೋಗ್ಯ ಸಮಸ್ಯೆಗಳು ಎಲ್ಲರಿಗೂ ಇರುತ್ತದೆ. ನವಜಾತ ಶಿಶು, ಗರ್ಭಿಣಿ ಬಾಣಂತಿ ಮತ್ತು ಚಿಕ್ಕ ಮಕ್ಕಳು ವಯೋವೃದ್ದರಿಗೆ ಹೆಚ್ಚಿನ ಕಾಳಜಿ ಮಾಡಬೇಕು ಎಂದರು.ಏಪ್ರಿಲ್ 26 ರಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಂಸದರ ಆಯ್ಕೆ ಮತದಾನ ನಡೆಯಲಿದೆ. ಮತದಾನದಲ್ಲಿ ಎಲ್ಲರೂ ಭಾಗವಹಿಸಿ, ಆಮಿಷಗಳಿಗೆ ಬಲಿಯಾಗದೆ ನಿಮ್ಮಷ್ಟದಂತೆ ಮತ ಚಲಾಯಿಸಿ, ಬಲಿಷ್ಠ ರಾಷ್ಟ್ರ ನಿರ್ಮಾಣ ನಮ್ಮೆಲ್ಲರ ಜವಾಬ್ದಾರಿ ಎಂದು ಡಾ.ಬಿ.ವಿ.ಗಿರೀಶ್ ಹೇಳಿದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ, ಆರೋಗ್ಯ ನಿರೀಕ್ಷಣಾಧಿಕಾರಿ ರಂಗನಾಥ ರೆಡ್ಡಿ, ಪ್ರವೀಣ್, ಪವನ್ ಆರೋಗ್ಯ ಸುರಕ್ಷತಾಧಿಕಾರಿ ಮಂಜುಳಾ ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

## ಮತದಾನಕ್ಕೆ ಇನ್ನೂ ಕೇವಲ 20 ದಿನಗಳು ಮಾತ್ರ ಬಾಕಿ



» **ಚಳ್ಳಕೆರೆ**

ಲೋಕಸಭಾ ಕ್ಷೇತ್ರದ ಮತದಾನಕ್ಕೆ ಇನ್ನು ಕೇವಲ 20ದಿನಗಳು ಮಾತ್ರ ಬಾಕಿ ಇದ್ದು, ಚುನಾವಣೆಯಲ್ಲಿ ಹಣ, ಬೆಲೆಬಾಳುವ ವಸ್ತು ಮುಂತಾದವುಗಳನ್ನು ಸಾಗಾಟ ಮಾಡದಂತೆ ತಡೆಯಲು ಆರು ಕಡೆ ಚೆಕ್‌ಪೋಸ್ಟ್‌ಗಳನ್ನು ನಿರ್ಮಿಸಿದರೂ ಚೆಕ್‌ಪೋಸ್ಟ್‌ಗಳಲ್ಲಿ ಮಾತ್ರ ಸರಿಯಾದ ರೀತಿಯಲ್ಲಿ ತಪಾಸಣಾ ಕಾರ್ಯ ನಡೆಯುತ್ತಿಲ್ಲವೆಂದು ಸಾರ್ವಜನಿಕರು ಆರೋಪಿಸಿದ್ದಾರೆ ಎಂದು ಸಹಾಯಕ ಚುನಾವಣಾಧಿಕಾರಿ ಬಿ.ಆನಂದ್ ತಿಳಿಸಿದರು. ಅವರು, ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸೆಕ್ಟರ್ ಅಧಿಕಾರಿಗಳ ಸಭೆ ಕಡೆದು ಚೆಕ್‌ಪೋಸ್ಟ್ ಕಾರ್ಯನಿರ್ವಹಣೆಯೂ ಸೇರಿದಂತೆ ಮತಗಟ್ಟೆಗಳ ವಾಸ್ತವ ಸ್ಥಿತಿಗತಿಗಳ ಬಗ್ಗೆ ಮಾಹಿತಿ ಪಡೆದರಲ್ಲದೆ, ಯಾವುದೇ ಮತಗಟ್ಟೆಯಲ್ಲಿ ಸೌಲಭ್ಯದ ಕೊರತೆ ಉಂಟಾಗದಂತೆ ಜಾಗ್ರತೆ ವಹಿಸಬೇಕು ಎಂದರು.

ಮತಗಟ್ಟೆಗಳ ಕಾರ್ಯನಿರ್ವಹಣೆ ಹಾಗೂ ಚುನಾವಣೆ ಸಂಬಂಧಿಸಿದ ವಿಷಯಗಳ ಬಗ್ಗೆ ಆಗಿದಾಂಗೆ ಸಭೆ ನಡೆಸಿ ಮಾಹಿತಿ ನೀಡುತ್ತಿದ್ದರೂ ಅವುಗಳ ಅನುಷ್ಠಾನದಲ್ಲಿ ಪ್ರಗತಿಕಾಣುತ್ತಿಲ್ಲ. ಚುನಾವಣೆ ಕಾರ್ಯಕ್ಕೆ ನಿಯೋಜನೆಗೊಂಡ ಪ್ರತಿಯೊಬ್ಬ ಅಧಿಕಾರಿ, ಸಿಬ್ಬಂದಿ ವರ್ಗ ಮುಂಬರುವ 20 ದಿನಗಳ ಕಾಲ ಯಾವುದೇ ಕೊರತೆ ಉಂಟಾಗದಂತೆ ಜಾಗ್ರತೆ ವಹಿಸಿ ಕೆಲಸ ನಿರ್ವಹಿಸಬೇಕಿದೆ. ಸಣ್ಣಪುಟ್ಟ ಸಮಸ್ಯೆಗಳು ಸಹ ಚುನಾವಣೆ ವ್ಯವಸ್ಥೆಗೆ ಅಘಾತವನ್ನುಂಟು ಮಾಡುವ ಸಂಭವ ಹೆಚ್ಚು ಆದ್ದರಿಂದ ಪ್ರತಿಯೊಬ್ಬರೂ ಈ ನಿಟ್ಟಿನಲ್ಲಿ ಚಿಂತನೆ ನಡೆಸಿ ಕಾರ್ಯರೂಪಕ್ಕೆ ತರುವ ವಿಚಾರದಲ್ಲಿ ಕ್ರಿಯಾಶೀಲತೆಯಿಂದ ಕಾರ್ಯನಿರ್ವಹಿಸಬೇಕು ಎಂದರು. ತಹಶೀಲ್ದಾರ್ ರೇಹಾನ್‌ಪಾಷ, ಚುನಾವಣಾ ಶಿರಸ್ತೇದಾರ್ ಹಸೀನಬೇಗಂ, ಕಂದಾಯಾಧಿಕಾರಿ ಲಿಂಗೇಗೌಡ, ಗ್ರಾಮಲೆಕ್ಕಿಗ ಪ್ರಕಾಶ್, ಡಿ.ಶ್ರೀನಿವಾಸ್, ಓಬಳೇಶ್, ಶ್ರೀಧರ ಮುಂತಾದವರು ಉಪಸ್ಥಿತರಿದ್ದರು.

## ಕುಮಾರಸ್ವಾಮಿ ಮನೆಗೆ ಕಾರಜೋಳ

**ಚಳ್ಳಕೆರೆ:** ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಗೋವಿಂದಎಂ. ಕಾರಜೋಳ ಮಾಜಿ ಸಚಿವ ತಿಪ್ಪೇಸ್ವಾಮಿಯವರ ಪುತ್ರ ಕೆ.ಟಿ.ಕುಮಾರಸ್ವಾಮಿಯವರನ್ನು ಅವರ ನಿವಾಸದಲ್ಲಿ ಬುಧವಾರ ಸಂಜೆ ಭೇಟಿ ಮಾಡಿದರು.ಬಿಜೆಪಿ ಪಕ್ಷದ ಹಿರಿಯ ಮುತ್ಸದಿ, ತಿಪ್ಪೇಸ್ವಾಮಿಯವರು ನಮ್ಮ ಪಕ್ಷದ ನಿಷ್ಠವಂತ ರಾಜಕಾರಣಿ. ಅವರ ಪುತ್ರ ಕೆ.ಟಿ.ಕುಮಾರಸ್ವಾಮಿ ಸಹ ನಮ್ಮ ಪಕ್ಷದಲ್ಲೇ ಹಲವಾರು ಹಂತದಲ್ಲಿ ಕಾರ್ಯನಿರ್ವಹಿಸಿದವರು. ರಾಜಕೀಯ ಬೆಳೆವಣಿಗೆ ಹಿನ್ನೆಲೆಯಲ್ಲಿ ಪಕ್ಷದಿಂದ ದೂರವಾಗಿದ್ದ ಅವರನ್ನು ಮತ್ತೆ ಪಕ್ಷಕ್ಕೆಕರೆತರುವ ಎಲ್ಲಾ ಪ್ರಯತ್ನಗಳು ನಡೆಯುತ್ತಿವೆ. ಬಿಜೆಪಿಗಾಗಿ ದುಡಿದ ತಿಪ್ಪೇಸ್ವಾಮಿಯವರನ್ನು ಎಂದಿಗೂ ಮರೆಯುವಂತಿಲ್ಲ. ಅವರ ಪತ್ರರೂ ಸಹ ಪಕ್ಷದಲ್ಲಿ ಹಲವಾರು ಹಂತದಲ್ಲಿ ಕಾರ್ಯನಿರ್ವಹಿಸಿದ್ದಾರೆ ಎಂದರು.



**ಪ್ರಮುಖ ಸುದ್ದಿ**

### ಕಾರ್ಯಕರ್ತರ ಸಭೆಯಲ್ಲಿ ಮಾಜಿ ಸಚಿವ ಗೂಳಿಹಟ್ಟಿ ಶೇಖರ್ ಹೇಳಿಕೆ

# ನನ್ನಿಂದ ಸಿಎಂ ಆಗಿದ್ದ ಯಡಿಯೂರಪ್ಪ, ನನಗೆ ದ್ರೋಹ ಬಗೆದರು

» **ಹೊಸದುರ್ಗ**

2008 ರಲ್ಲಿ ಪ್ರಥಮ ಬಾರಿಗೆ ಹೊಸದುರ್ಗ ವಿಧಾನಸಭಾ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿ ಗೆದ್ದಾಗ, ಬಿಜೆಪಿ ಸರ್ಕಾರ ರಚನೆ ಮಾಡಲು ಶಾಸಕರ ಸಂಖ್ಯೆ ಬಲ ಕಡಿಮೆ ಇದ್ದಂತಹ ಸಂದರ್ಭದಲ್ಲಿ ಯಡಿಯೂರಪ್ಪ ಮುಖ್ಯಮಂತ್ರಿ ಆಗಲು ನನ್ನ ಪಾತ್ರ ಬಹಳ ಮುಖ್ಯವಾಗಿತ್ತು. ನನ್ನಿಂದ ಮುಖ್ಯಮಂತ್ರಿಯಾದ ವ್ಯಕ್ತಿ ನನಗೆ ದ್ರೋಹ ಬಗೆದಿದ್ದಾರೆ. ಈ ಈ ಮಾತನ್ನು ನೂರು ಬಾರಿ ಎದೆ ತಟ್ಟಿಕೊಂಡು ಹೇಳುವೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿರುದ್ಧ ಮಾಜಿ ಸಚಿವ ಗೂಳಿಹಟ್ಟಿ ಶೇಖರ್ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ರಾಧಾಕೃಷ್ಣ ಸಮುದಾಯ ಭವನದಲ್ಲಿ ಬುಧವಾರ ಆಯೋಜಿಸಿದ್ದ ಗೂಳಿಹಟ್ಟಿ ಶೇಖರ್ ಅವರಿಗೆ 2008 ರಿಂದಲೂ ಬೆಂಬಲಕ್ಕೆ ನಿಂತು ಶ್ರಮಿಸಿದ ಹಿರಿಯ ಮುಖಂಡರು ಹಾಗೂ ಕಾರ್ಯಕರ್ತರ ಪುನರ್ ಸಮ್ಮಿಲನ ಸಭೆ ನೇತೃತ್ವ ವಹಿಸಿ ಮಾತನಾಡಿದರು.




ನಾನು ಮಂತ್ರಿಯಾದ ಅವಧಿಯಲ್ಲಿ ಒಬ್ಬ ಪೋಲಿಸ್ ಸಬ್ ಇನ್ಸ್ ಪೆಕ್ಟರ್ ವರ್ಗಾವಣೆ ಮಾಡಿಸಿಕೊಳ್ಳಲು ಸಾಧ್ಯವಾಗಲಿಲ್ಲ. ಸರ್ಕಾರ ರಚನೆ ಮಾಡಲು ಮೊದಲ ಅವಧಿಯಲ್ಲಿ ಅವರ ಸಮುದಾಯದ ಕೆಲವು ಶಾಸಕರು ಅವರಿಗೆ ಸಹಕಾರ ಕೊಡಲಿಲ್ಲ. ಆಪರೇಷನ್ ನಡೆದಾಗ ಅವರ ಸ್ವಜಾತಿಯವರು ರಾಜೀನಾಮೆ ನೀಡಿ, ಬಿಜೆಪಿ ಸೇರಿದರು. ಯಡಿಯೂರಪ್ಪ ಅವರನ್ನು ಮುಖ್ಯಮಂತ್ರಿ ಮಾಡಲು ಹಿಂದುಳಿದ ವರ್ಗದವರು ಬೇಕು ಎಂದು ವ್ಯಂಗ್ಯವಾಡಿದರು.

ಚುನಾವಣೆಯಲ್ಲಿಸ್ಪರ್ಧಿಸುವಮೊದಲು ದೇವಿಗೆರೆ ಕಾರ್ಯಕ್ರಮವೊಂದರಲ್ಲಿ ಎಸ್.ಲಿಂಗಮೂರ್ತಿ ಅವರು, ಹೊಸದುರ್ಗ ವಿಧಾನಸಭಾ ಕ್ಷೇತ್ರ ಸಾಮಾನ್ಯರಿಗಿದೆ. ಪಕ್ಕದ ಕ್ಷೇತ್ರ (ಹೊಳಲ್ಕೆರೆ) ಮೀಸಲು ಕ್ಷೇತ್ರವಿದೆ, ಅಲ್ಲಿ ಸ್ಪರ್ಧಿಸಿ ಎಂದು ಅವಮಾನ ಮಾಡಿದ್ದರು. ಆಗ ಧೃತಿಗೆಡದೆ ಚುನಾವಣೆಯಲ್ಲಿ ಸ್ಪರ್ಧಿಸಿ, ಗೆಲುವು ಸಾಧಿಸಿದೆ.

ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಎರಡು ಪಕ್ಷದ ಅಭ್ಯರ್ಥಿಗಳಿದ್ದಾರೆ. ಕಾರ್ಯಕರ್ತರು ಸೂಚಿಸಿದ ವ್ಯಕ್ತಿಗೆ ಅಥವಾ ತಾವು ಸೂಚಿಸಿದ ವ್ಯಕ್ತಿಗೆ ಎಲ್ಲರೂ ಸಹಕಾರ ನೀಡೋಣ. ಮತ್ತೊಮ್ಮೆ ಸಭೆ ಕರೆದು, ನಮ್ಮ ಬೆಂಬಲ ಯಾರಿಗೆ ಎಂಬುದನ್ನು ನಿರ್ಧರಿಸೋಣ. ಇನ್ಮುಂದೆ ಹೊಸದುರ್ಗದಲ್ಲೆ ಇರುತ್ತೇನೆ. ತಾ.ಪಂ ಮತ್ತು ಜಿ.ಪಂ ಚುನಾವಣೆಗಳನ್ನು ಪಕ್ಷೇತರ ಅಭ್ಯರ್ಥಿಗಳಾಗಿ ಎದುರಿಸೋಣ, ಎಲ್ಲಾ ಕ್ಷೇತ್ರಗಳಲ್ಲೂ ಗೆಲುವು ನಿಶ್ಚಿತ. ಕಾರ್ಯಕರ್ತರಿಗೆ ಯಾವುದೇ ದೌರ್ಜನ್ಯವಾದರೂ ಸದಾ ನಿಮ್ಮ ಪರವಾಗಿರುತ್ತೇನೆ. ಈ ಬಗ್ಗೆ ಯಾರಿಗೂ ಗೊಂದಲಬೇಡ ಎಂದು ಸ್ಪಷ್ಟನೆ ನೀಡಿದರು. ಚಿತ್ರದುರ್ಗ ಲೋಕಸಭಾ ಚುನಾವಣೆಯಲ್ಲಿ ಕೇವಲ 30 ರಿಂದ 50.ಸಾವಿರ ಮತಗಳ ಅಂತರದಲ್ಲಿ ಮಾತ್ರ ಗೆಲುವು ಸಾಧಿಸಬಹುದು. ಗೂಳಿಹಟ್ಟಿ ಶೇಖರ್ ಬೆಂಬಲಿಗರ ಸಹಕಾರವೂ ಮುಖ್ಯವಾಗಿದೆ. ಈ ಹಿಂದೆ ವಿಧಾನಸಭಾ ಚುನಾವಣೆಯಲ್ಲಿ ಕೊನೆ ಸಮಯದಲ್ಲಿ ನೀಡಿದ ಹೇಳಿಕೆಯಿಂದ ಒಬ್ಬ ಅಭ್ಯರ್ಥಿಗೆ 30 ಸಾವಿರ ಮತಗಳು ಶಿಫ್ಟ್ ಆದವು. ಒಟ್ಟು ಗೂಳಿಹಟ್ಟಿ ಶೇಖರ್ ಮತಗಳು 40 ಸಾವಿರ ಇವೆ.

**ಭದ್ರಾ ನೀರು ಬರುತ್ತಿಲ್ಲ** : ತಾಲ್ಲೂಕಿನ ರೈತರು ಹಲವೆಡೆ ಟ್ಯಾಂಕರ್ ನಿಂದ ನೀರು ಹಾಯಿಸುತ್ತಿದ್ದಾರೆ. ಭದ್ರಾಯಿಂದ ಇನ್ನೂ ನೀರು ಬಂದಿಲ್ಲ. ಜನರಿಗೆ ನೀರಿನ ಅವಶ್ಯಕತೆ ಇರುವುದು ಈ ಸಮಯದಲ್ಲಿ. ಆ ಭಾಗದಲ್ಲೇ ನೀರಿಲ್ಲ, ಅಲ್ಲಿನ ಜನ ನೀರು ನೀಡಲು ಒಪ್ಪುತ್ತಾರಾ?. ಅದರ ಬದಲು ಇಲ್ಲೆ ಪಕ್ಕದ ವಿವಿ ಸಾಗರದಿಂದ ನೀರು ತರಬಹುದು, ಅದು ಹೊಸದುರ್ಗ ತಾಲ್ಲೂಕಿಗೆ ಸೇರಿದೆ. ಲೋಕಸಭಾ ಚುನಾವಣೆ ನಂತರ ಪ್ರತಿ ಹಳ್ಳಿಗೂ ಪಾದಾಯಾತ್ರೆ ಮಾಡಿ, ಈ ಬಗ್ಗೆ ಜನರಿಗೆ ಮಾಹಿತಿ ನೀಡುತ್ತೇನೆ ಎಂದರು.

# 28ರಲ್ಲೂ ಗೆಲುವು ಬಿಜೆಪಿ ಖಚಿತ: ವಿಜಯೇಂದ್ರ








» **ಚಿತ್ರದುರ್ಗ**

ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ ಸಜ್ಜನ ರಾಜಕಾರಣಿ. ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಇವರ ಆಯ್ಕೆ ಮುಂದಿನ ದಿನದಲ್ಲಿ ಚಿತ್ರದುರ್ಗ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿ ದೃಷ್ಟಿಯಿಂದ ಉತ್ತಮವಾಗಿದೆ. ಈ ಕ್ಷೇತ್ರದ ಮತದಾರರು ದೊಡ್ಡ ಅಂತರದಲ್ಲಿ ಆರ್ಶೀವಾದವನ್ನು ಮಾಡಲಿದ್ದಾರೆ ಎಂಬ ನಂಬಿಕೆ ಇದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೋದಿ ಮತ್ತೊಮ್ಮೆ ಎಂಬುದು ಎಲ್ಲರ ಆಶಯವಾಗಿದೆ. ಮೋದಿಯವರ ಬೆಂಬಲಕ್ಕೆ ಕಾರಜೋಳ ರವರು ಲೋಕಸಭೆಯಲ್ಲಿ ಇರಬೇಕಿದೆ. ಇವರಿಗೆ ಮತದಾರರು ಆರ್ಶೀವಾದವನ್ನು ಮಾಡುತ್ತಾರೆ ಎಂಬ ನಂಬಿಕೆ ಇದೆ ಎಂದರು.ಶಿವಮೊಗ್ಗದಲ್ಲಿ ಈಶ್ವರಪ್ಪರವರ ಸ್ಪರ್ಧೆ ಬಗ್ಗೆ ಮಾತನಾಡಿ, ನನಗೆ ಇನ್ನೂ ಸಹಾ ವಿಶ್ವಾಸ ಇದೆ, ಕೇಂದ್ರದ ವರಿಷ್ಠರು ಇವರ ಜೊತೆಯಲ್ಲಿ ಮಾತನಾಡಿ ಸಮಸ್ಯೆಯನ್ನು ಬಗೆಹರಿಸುತ್ತಾರೆ ಎಂಬ ನಂಬಿಕೆ ಇದೆ. ಈಶ್ವರಪ್ಪರವರ ಅಪೇಕ್ಷೆಯನ್ನು ಕೇಂದ್ರದ ವರಿಷ್ಠರ ಮುಂದೆ ಹೇಳಲಿ, ಅದನ್ನು ವರಿಷ್ಠರು ತೀರ್ಮಾನ ಮಾಡುತ್ತಾರೆ. ನಾನು ಅವರನ್ನು ಭೇಟಿ ಮಾಡಲಿಕ್ಕೆ ಸಾಧ್ಯವಾಗಿಲ್ಲ, ನನ್ನ ಬಗ್ಗೆ ಏನು ಕೋಪ ಎನ್ನುವುದನ್ನು ಅವರ ಜತೆ ಕೂತು ಚರ್ಚೆ ಮಾಡುತ್ತೇನೆ ಎಂದು ತಿಳಿಸಿದರು.

ರಾಜ್ಯದ 28 ಕ್ಷೇತ್ರಗಳಲ್ಲಿಯೂ ಸಹಾ ಬಿಜೆಪಿ ಮತ್ತು ಜೆಡಿಎಸ್ ಅಭ್ಯರ್ಥಿಗಳು ಸ್ಪರ್ಧೆ ಮಾಡಿದ್ದಾರೆ. ಅವರ ಪರವಾಗಿ ಅಲೆ ಇದೆ. ಎಲ್ಲಾ ಕ್ಷೇತ್ರಗಳ ಸಹಾ ನರೇಂದ್ರ ಮೋದಿಯವರ ಜನ ಪ್ರಿಯತೆಯ ಪರಿಣಾಮವಾಗಿ ಎಲ್ಲಾ ಕಡೆಯಲ್ಲಿಯೂ ಸಹಾ ಬಿಜೆಪಿ ಜೆಡಿಎಸ್ ಅಭ್ಯರ್ಥಿಗಳು ಜಯವನ್ನು ಗಳಿಸುತ್ತಾರೆ ಎಂಬ ವಾತಾವರಣ ನಿರ್ಮಾಣವಾಗಿದೆ.ದೇಶದಲ್ಲಿಮೋದಿಯವರ ಜನಪ್ರಿಯತೆ ಇದೆ. 10 ವರ್ಷಗಳಲ್ಲಿ ಅವರ ಸರ್ಕಾರದ ಮಾಡಿದ ಸಾಧನೆ ಅವರ ಜನಪರವಾದ ಯೋಜನೆಗಳು ಮನೆ ಮನೆಗೆ ತಲುಪಿದೆ. ಕಾಂಗ್ರೆಸ್ ಪಕ್ಷದ ಬೂಟಾಟಿಕೆ ಯೋಜನೆಯ ಬಗ್ಗೆ ಜನರಲ್ಲಿ ವಿಶ್ವಾಸ ಇಲ್ಲವಾಗಿದೆ, ದೇಶದ ಸರ್ವತೋಮುಖ ಅಭಿವೃದ್ಧಿ ದೃಷ್ಟಿಯಿಂದ ದೇಶದ ಸುರಕ್ಷತೆಯ ದೃಷ್ಟಿಯಿಂದ ನರೇಂದ್ರ ಮೋದಿಯವರನ್ನು ಬೆಂಬಲಿಸುತ್ತಾರೆ ಎಂಬ ನಂಬಿಕೆ ಇದೆ ಎಂದರು.ಕೇಂದ್ರ ಸಚಿವರಾದ ಎ.ನಾರಾಯಣ ಸ್ವಾಮಿ ಮಾತನಾಡಿ, 2019ರ ಚುನಾವಣೆಯಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಗೆದ್ದ ಬಿಜೆಪಿ ಅಭ್ಯರ್ಥಿಗಿಂತ ಹೆಚ್ಚಿನ ಮತಗಳ ಗೆಲುವನ್ನು ಗೋವಿಂದ ಕಾರಜೋಳ ರವರು ಸಾಧಿಸಲಿದ್ದಾರೆ.

ಈ ಕ್ಷೇತ್ರವನ್ನು ಮತ್ತೇ ಬಿಜೆಪಿ ತಕ್ಕೆಗೆ ಬರುವುದಕ್ಕೆ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು ಹುಮಸ್ಸಿನಿಂದ ಇದ್ದಾರೆ. ಮತ್ತೋಮ್ಮೆ ಮೋದಿ ಎಂಬ ನಿರ್ಣಯದಂತೆ ಆತ್ಮ ನಿರ್ಭಯ ಭಾರತ ನಿರ್ಮಾಣಕ್ಕಾಗಿ ದೇಶದ ಜನತೆ ಬಿಜೆಪಿಗೆ ಮತವನ್ನು ಹಾಕಲಿದ್ದಾರೆ. 400ಕ್ಕೂ ಹೆಚ್ಚು ಕ್ಷೇತ್ರದಲ್ಲಿ ಗೆಲುವನ್ನು ಸಾಧಿಸಲಿದ್ದಾರೆ, ಕಾರಜೋಳ ಪರವಾಗಿ 6 ರಿಂದ ಪ್ರಚಾರವನ್ನು ಪ್ರಾರಂಭ ಮಾಡುವುದಾಗಿ ತಿಳಿಸಿದರು.

ಮಾಜಿ ಸಚಿವ ಮಾಧುಸ್ವಾಮಿ ಮಾತನಾಡಿ ಈ ಕ್ಷೇತ್ರದಲ್ಲಿ ಗೋವಿಂದ ಕಾರಜೋಳ ರವರು ಗೆಲ್ಲುವ ವಿಶ್ವಾಸ ಇದೆ. ನಾವುಗಳು ಅವರ ಗೆಲುವಿಗೆ ಶ್ರಮ ಹಾಕುತ್ತಿದ್ದೇವೆ. ಚಿತ್ರದುರ್ಗ ಮತ್ತು ತುಮಕೂರು ಎರಡು ಕ್ಷೇತ್ರಗಳಲ್ಲಿಯೂ ಸಹಾ ಬಿಜೆಪಿ ಗೆಲುವನ್ನು ಸಾಧಿಸಲಿದ್ದಾರೆ. ಪಕ್ಷದ ನಿರ್ಣಯದಂತೆ ಗೋವಿಂದ ರವರು ಈ ಕ್ಷೇತ್ರದಲ್ಲಿ ಸ್ಪರ್ದೆ ಮಾಡಿದ್ದಾರೆ. ಇದು ಅವರು ಬಯಸಿದಂತ ಕ್ಷೇತ್ರದಲ್ಲಿ ಪಕ್ಷದ ನಿರ್ಣಯದಂತೆ ಸ್ಪರ್ಧೆ ಮಾಡಿದ್ದಾರೆ ಎಂದರು.

**ಮೆರವಣಿಗೆ:** ಲೋಕಸಭಾ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ ಗೋವಿಂದ ಕಾರಜೋಳ ಅವರು ಚಿತ್ರದುರ್ಗದ ನೀಲಕಂಠೇಶ್ವರಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ, ಗಾಂಧಿ ಸರ್ಕಲ್ ಮುಖಾಂತರ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಅಪಾರ ಸಂಖ್ಯೆಯ ಕಾರ್ಯಕರ್ತರೊಂದಿಗೆ ಮೆರವಣಿಗೆ ಮೂಲಕ ತೆರಳಿ ನಾಮಪತ್ರ ಸಲ್ಲಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ಕೇಂದ್ರ ಸಚಿವ ಎ ನಾರಾಯಣಸ್ವಾಮಿ, ಮಾಜಿ ಮುಖ್ಯಮಂತ್ರಿ ಸದಾನಂದ ಗೌಡ, ವಿಧಾನಪರಿಷತ್ ಮುಖ್ಯ ಸಚೇತಕ ಎನ್ ರವಿಕುಮಾರ್, ಶಾಸಕರಾದ ಎಂ ಚಂದ್ರಪ್ಪ, ಗಾಲಿ ಜನಾರ್ಧನ ರೆಡ್ಡಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಮಾಜಿ ಶಾಸಕರಾದ ಜಿ.ಹೆಚ್.ತಿಪ್ಪಾರೆಡ್ಡಿ, ಎಸ್.ತಿಪ್ಪೇಸ್ವಾಮಿ, ಎಸ್.ಕೆ.ಬಸವರಾಜನ್, ಮಾಜಿ ಸಚಿವರಾದ ಬಿ.ಶ್ರೀರಾಮುಲು, ವಿಧಾನ ಪರಿಷತ್ ಸದಸ್ಯರಾದ ವೈ.ಎ ನಾರಾಯಣಸ್ವಾಮಿ, ಚಿದಾನಂದ ಗೌಡ, ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರುಳಿ, ಹನುಮಂತೆ ಗೌಡ್ರು, ಜೆಡಿಎಸ್ ಜಿಲ್ಲಾಧ್ಯಕ್ಷ ಜಯಣ್ಣ, ಮಾಜಿ ಸಂಸದರಾದ ಜನಾರ್ಧನಸ್ವಾಮಿ,ಜೆಡಿಎಸ್ ಮುಖಂಡರಾದ ಕಾಂತರಾಜ್, ಯಶೋಧರ್, ರವೀಶ್, ರವೀಂದ್ರ, ತಿಪ್ಪೇಸ್ವಾಮಿ, ಮುಂತಾದ ಬಿಜೆಪಿ ಹಾಗೂ ಜೆಡಿಎಸ್ ಜಿಲ್ಲಾ ಹಾಗು ರಾಜ್ಯ ನಾಯಕರು, ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T